# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –303 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:28–06–2025 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 303 | RNI No: KARKAN/2023/88462 | KA/SK/CTA-874/2024-2026 | Chitradurga | Date: 28-06-2025 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಗೃಹಲಕ್ಷ್ಮೀ ಫಲಾನುಭವಿಗಳು ಸ್ವಸಹಾಯ ಗುಂಪುಗಳ ವ್ಯಾಪ್ತಿಗೆ: ಡಾ.ರಂಗಸ್ವಾಮಿ 2

ವಿದ್ಯುತ್ ಸುರಕ್ಷತೆಯ ಬಗ್ಗೆ ಶಾಲೆಗಳಿಗೆ ಹೋಗಿ ಶಾಲಾ ಮಕ್ಕಳಲ್ಲಿ ಜಾಗೃತಿ ಮೂಡಿಸಿ 3

ಕೆಂಪೇಗೌಡರು ದಕ್ಷ, ದೂರದೃಷ್ಟಿಯುಳ್ಳಂತಹ ಆಡಳಿತಗಾರ: ಮುಖ್ಯಮಂತ್ರಿ ಸಿದ್ದರಾಮಯ್ಯ 4



ಸುದ್ದಿ, ಜಾಹಿರಾತಿಗೆ
9686622252


## ಫಾಸ್ಟ್ ನ್ಯೂಸ್

### ಜಿಲ್ಲಾ ಯುವ ಕಾಂಗ್ರೆಸ್‌ಗೆ ನೇಮಕ

» **ಚಿತ್ರದುರ್ಗ**

ಜಿಲ್ಲಾ ಯುವ ಕಾಂಗ್ರೆಸ್ ಕಾನೂನು ಘಟಕದವತಿಯಿಂದ ಜೂ. 28 ರ ಶನಿವಾರ ಬೆಳ್ಳಿಗೆ 10 ಗಂಟೆಗೆ ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸಂವಿಧಾನ ಓದು ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ ಎಂದು ಜಿಲ್ಲಾ ಯುವ ಕಾಂಗ್ರೆಸ್,ಕಾನೂನು ಘಟಕದ ಅಧ್ಯಕ್ಷರಾದ ಶಶಾಂಕ್ ಎನ್ ತಿಳಿಸಿದ್ದಾರೆ. ಈ ಕಾರ್ಯಕ್ರಮಕ್ಕೆ ಕರ್ನಾಟಕ ಯುವ ಕಾಂಗ್ರೆಸ್ ಉಸ್ತುವಾರಿಗಳಾದ ನಿಗಮ್ ಬಂಡಾರಿ, ಯುವ ಕಾಂಗ್ರೆಸ್‌ನ ರಾಜ್ಯಧ್ಯಕ್ಷರಾದ ಮಂಜುನಾಥ್ ಗೌಡ ಹಾಗೂ ಯುವ ಕಾಂಗ್ರೆಸ್, ಕಾನೂನು ಘಟಕದ ರಾಜ್ಯಾಧ್ಯಕ್ಷರಾದ ಶ್ರೀಧರ್ ಜಾದವ್ ಭಾಗವಹಿಸಲಿದ್ದಾರೆ.

### ಜೂನ್ 28 ರಂದು ಸಿಆರ್ ಸಿ ಕೇಂದ್ರದಲ್ಲಿ ನೇರಳೆ ಮೇಳ

» **ದಾವಣಗೆರೆ**

ದಿವ್ಯಾಂಗರಿಗೆ ಇರುವ ಸರ್ಕಾರದ ಯೋಜನೆಗಳ ಕುರಿತು ಮಾಹಿತಿ ಹಾಗೂ ದಿವ್ಯಾಂಗರಲ್ಲಿರುವ ಸಾಂಸ್ಕೃತಿಕ ಕೌಶಲ್ಯ, ಕ್ರೀಡಾ ಪ್ರತಿಭೆ, ಉದ್ಯಮಶೀಲತೆ ಗುರುತಿಸುವ ಉದ್ದೇಶದಿಂದ ಇದೇ ಜೂನ್ 28 ರಂದು ನಗರದ ವಡ್ಡನಹಳ್ಳಿ ಸಮೀಪದ ದಿವ್ಯಾಂಗ ವ್ಯಕ್ತಿಗಳ ಸಂಯೋಜಿತ ಪ್ರಾದೇಶಿಕ ಕೇಂದ್ರದಲ್ಲಿ "ನೇರಳೆ ಮೇಳ" ಆಯೋಜಿಸಲಾಗಿದೆ.ಜಿಲ್ಲೆಯಲ್ಲಿ ಮೊದಲ ಬಾರಿಗೆ ನಡೆಯುತ್ತಿರುವ ವಿಶಿಷ್ಟ ಕಾರ್ಯಕ್ರಮ ಇದಾಗಿದ್ದು, ರಾಜ್ಯ ಅಂಗವಿಕಲ ಇಲಾಖೆ ಆಯುಕ್ತ ದಾಸ್ ಸೂರ್ಯವಂಶಿ ಕಾರ್ಯಕ್ರಮ ಉದ್ಘಾಟಿಸುವರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕಾರ್ಯದರ್ಶಿ ಡಾ.ಶಮ್ಲಾ ಇಕ್ಬಾಲ್, ಅಂಗವಿಕಲ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದ ನಿರ್ದೇಶಕ ಟಿ.ರಾಘವೇಂದ್ರ, ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ, ಜಿಪಂ ಸಿಇಓ ಗಿತ್ತೆ ಮಾಧವ ವಿಠಲ ರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಭಾಗವಹಿಸುವರು. ಮೇಳದಲ್ಲಿ 100 ಅಂಗವಿಕಲ ಹಾಗೂ ಅರ್ಹ ಹಿರಿಯ ನಾಗರಿಕರಿಗೆ ವ್ಹೀಲ್ ಚೇರ್, ಕ್ರಚಸ್, ಪ್ರೊಸ್ಥೆಸಿಸ್ ಇನ್ನಿತರೆ ಉಚಿತ ಸಾಧನಗಳ ವಿತರಣೆ, ಅತ್ಯಾಧುನಿಕ ಸಾಧನ ಉಪಕರಣಗಳ ಪ್ರದರ್ಶನಕ್ಕಾಗಿ 25 ಮಳಿಗೆ, ಅಂಗವಿಕಲರ ಸೃಜನಶೀಲತೆ ಹಾಗೂ ಕೌಶಲ್ಯ ಪ್ರದರ್ಶಿಸುವ ಕಲಾ ಪ್ರದರ್ಶನ, ವ್ಹೀಲ್‌ಚೇರ್ ಓಟ ಸೇರಿದಂತೆ ವಿವಿಧ ಕ್ರೀಡಾ ಸ್ಪರ್ಧೆ, ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ದಿವ್ಯಾಂಗ ವ್ಯಕ್ತಿಗಳ ಸಂಯೋಜಿತ ಪ್ರಾದೇಶಿಕ ಕೇಂದ್ರದ ನಿರ್ದೇಶಕಿ ಮೀನಾಕ್ಷಿ ತಿಳಿಸಿದ್ದಾರೆ.

### ಹೊಳಲ್ಕೆರೆ ಕ್ಷೇತ್ರಕ್ಕೆ ಶಾಸಕ ಚಂದ್ರಪ್ಪ ಕೊಡುಗೆ ಶೂನ್ಯ ಕೆಡಿಪಿ ಸದಸ್ಯ ಸುರೇಶ್

» **ಹೊಳಲ್ಕೆರೆ**

ತಾಲೂಕಿನ ಕಾಗಳಗೆರೆ ಗ್ರಾಮದಲ್ಲಿ 8 ಕೋಟಿ ವೆಚ್ಚದ ಸಿಸಿ ರಸ್ತೆ ಉದ್ಘಾಟನೆ ಸಮಯದಲ್ಲಿ ಶಾಸಕ ಚಂದ್ರಪ್ಪನವರು ಜನರಿಗೆ ಸುಳ್ಳು ಹೇಳಿ ಯಾಮಾರಿಸುವ ಕೆಲಸವನ್ನು ಮಾಡಿದ್ದಾರೆ. ಶಾಸಕರಿಗೆ ಯಾವುದೇ ನೈತಿಕತೆ ಇದ್ದರೆ ಈ ಅನುದಾನ ಎಲ್ಲಿಂದ ಯಾರಿಂದ ಬಂದಿದೆ ಎಂದು ಜನರ ಮುಂದೆ ತಿಳಿಸಲಿ ಎಂದು ಗ್ಯಾಂಟಿ ಸದಸ್ಯ ಪಾಡಿಗಟ್ಟೆ ಸುರೇಶ್ ಆಗ್ರಹಿಸಿದ್ದಾರೆ. ಅವರು ಶುಕ್ರವಾರ ಪಟ್ಟಣದಲ್ಲಿ ಪತ್ರಿಕೆ ಪ್ರಕಟಣೆ ಬಿಡುಗಡೆ ಮಾಡಿ ಮಾತನಾಡಿದರು. ಗಣಿ ಬಾಧಿತ ಪ್ರದೇಶಗಳ 5 ಇಟ ಒಳಗೆ ಇರುವ ಗ್ರಾಮಗಳ ಮೂಲಭೂತ ಸೌಕರ್ಯ, ಶಿಕ್ಷಣ ,ಆರೋಗ್ಯ, ಕುಡಿಯುವ ನೀರು ಇಂತಹ ಅನೇಕ ಸೌಕರ್ಯಗಳಿಗೆ ಒತ್ತು ಕೊಡಲು ಕಾನೂನು ಮಾಡಿದ್ದರು, ಸರ್ಕಾರ ಕಾನೂನಿನ ಪ್ರಕಾರ ಅನುದಾನವನ್ನು ಹಂಚಿಕೆ ಮಾಡಬೇಕಾದ ಶಾಸಕರು ಅವರಿಗೆ ಬೇಕಾದ ರೀತಿ ಬೇಕಾಬಿಟ್ಟಿ ಬೇಕಾದವರಿಗೆ ಯೋಜನೆ ರೂಪಿಸಿ ಮನಸೋ ಇಚ್ಛೆ ಅನುಷ್ಠಾನ ಗೊಳಿಸಿದರೆ ಗಣಿ ಬಾಧಿತ ಗ್ರಾಮಗಳ ಗತಿ ಏನು. ಗಣಿಬಾಧಿತ ಗ್ರಾಮಗಳ ಅಭಿವೃದ್ಧಿಗೆ ನೀಡುವ ಅನುದಾನದಲ್ಲಿ ಶಂಕು ಸ್ಥಾಪನೆ ಮಾಡುವ ಶಾಸಕರು, ತಮ್ಮ ಶಾಸಕರ ಅನುದಾನದಲ್ಲಿ ಯಾವ ಕೆಲಸ ಮಾಡಿದ್ದಾರೆ. ಎಲ್ಲಿ ಅಭಿವೃದ್ಧಿ ಮಾಡಿದ್ದಾರೆಂದು ತಿಳಿಸಲಿ, ಅಥವಾ ಶ್ವೇತಪತ್ರ ಹೊರಡಿಸಲಿ. ಸರ್ಕಾರದ ಭಾಗವಾದ ಕೆಡಿಪಿ ಸದಸ್ಯರಾಗಿದ್ದ ನಾನು ಶಾಸಕರು ಹೇಳಿದ ಜಾಗದಲ್ಲಿ ಬಹಿರಂಗ ಚರ್ಚೆ ಬರುತ್ತೇನೆ. ಹೊಳಲ್ಕೆರೆ ತಾಲ್ಲೂಕಿನ ಅವರು ಕೈಗೊಂಡ ಕಾಮಗಾರಿ ಮತ್ತು ಅನುದಾನದ ಮಾಹಿತಿ ನೀಡಲಿ ಎಂದು ಸವಾಲು ಹಾಕಿದರು.

# ಕೆಂಪೇಗೌಡರ ದೂರದೃಷ್ಟಿ ಆಡಳಿತ ವ್ಯವಸ್ಥೆಗೆ ಮಾದರಿ: ಎಡಿಸಿ ಬಿ.ಟಿ.ಕುಮಾರಸ್ವಾಮಿ

» **ಚಿತ್ರದುರ್ಗ**

ನಾಡಪ್ರಭು ಕೆಂಪೇಗೌಡರ ದೂರದೃಷ್ಟಿ, ಆಡಳಿತ ವ್ಯವಸ್ಥೆಗೆ ಮಾದರಿ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ ಸಮಾರಂಭದಲ್ಲಿ ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.



ಕೆಂಪೇಗೌಡರು ಕೇವಲ ನಾಡಪ್ರಭು ಮಾತ್ರವಲ್ಲದೇ ಧರ್ಮಪ್ರಭುವೂ ಆಗಿದ್ದರು. ದೂರದೃಷ್ಟಿಯ ನಾಯಕ, ಅಪೂರ್ವ ಕನಸುಗಾರ, ಸಮರ್ಥ ಆಡಳಿತಗಾರರಾಗಿದ್ದ ಅವರು ಬೆಂಗಳೂರು ಜಾಗತಿಕ ನಗರವಾಗುವಲ್ಲಿ ಮೂಲ ಕಾರಣಕರ್ತರಾಗಿದ್ದಾರೆ ಎಂದರು.

ಬೆಂಗಳೂರು ಎಲ್ಲ ಧರ್ಮಗಳಿಗೆ, ಎಲ್ಲ ಭಾಷಿಕರಿಗೆ ಸುರಕ್ಷಿತ ಸ್ಥಳ. ಹಾಗಾಗಿ ಬೆಂಗಳೂರು ಶೈಕ್ಷಣಿಕ, ಔದ್ಯೋಗಿಕ, ಆರೋಗ್ಯ ಸೇರಿದಂತೆ ಎಲ್ಲ ವಲಯಗಳಲ್ಲಿಯೂ ತನ್ನದೇಯಾದ ಛಾಪು ಮೂಡಿಸಿದ್ದು, ಜಗತ್ತಿಗೆ ಸಿಲಿಕ್ಯಾನ್ ವ್ಯಾಲಿಯಾಗಿದೆ ಎಂದು ಹೇಳಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್ ಮಾತನಾಡಿ, ಬೆಂಗಳೂರು ಜಾಗತೀಕ ಮಟ್ಟದಲ್ಲಿ ಗಮನ ಸೆಳೆದಿದ್ದು, ಐಟಿ ಬಿಟಿ ಕಂಪನಿಗಳಿಗೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಪ್ರಸಿದ್ಧಿ ಪಡೆದಿದೆ. ಕೆಂಪೇಗೌಡರು ವೃತ್ತಿಯ ಹೆಸರಿನಲ್ಲಿ ವಿವಿಧ ಪೇಟೆಗಳನ್ನು ನಿರ್ಮಿಸಿದ್ದರು. ಈ ಪೇಟೆಗಳೆಲ್ಲವೂ ಪ್ರಸ್ತುತ ಇಂಡಸ್ಟ್ರೀಯಲ್ ಏರಿಯಾಗಳಾಗಿವೆ ಎಂದು ತಿಳಿಸಿದ ಅವರು, ಮಹಾ ಪುರುಷರ ಜಯಂತಿಗಳು ಕೇವಲ ಒಂದು ಸಮುದಾಯಕ್ಕೆ ಸೀಮಿತವಾಗದೇ ಎಲ್ಲ ಸಮುದಾಯದವರು ಸೇರಿ ಆಚರಣೆ ಮಾಡಬೇಕು.ಇಂದಿನ ಯುವ ಪೀಳಿಗೆ ಮಹನೀಯರ ವಿಚಾರಧಾರೆಗಳನ್ನು ತಿಳಿದುಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ ಅವರು ಮಾತನಾಡಿ, ಬೆಂಗಳೂರು ನಗರವನ್ನು ವಿಶ್ವವಿಖ್ಯಾತ ನಗರವಾಗಿ ನಿರ್ಮಾಣ ಮಾಡಿದವರು ಕೆಂಪೇಗೌಡರು. ಅವರ ಹೆಸರಿನಲ್ಲಿ ರಾಜ್ಯದಲ್ಲಿ 53 ಜನರಿಗೆ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ. ಅವರ ದೂರದೃಷ್ಟಿಯ ಯೋಜನೆಗಳು ಇಂದಿನ ಜನಪ್ರತಿನಿಧಿಗಳಿಗೆ ಮಾದರಿಯಾಗಿದೆ ಎಂದರು.

ಸಾಹಿತಿ ಹಾಗೂ ನಿವೃತ್ತ ಪ್ರಾಂಶುಪಾಲ ಡಾ. ಸಿ. ಶಿವಲಿಂಗಪ್ಪ ಉಪನ್ಯಾಸ ನೀಡಿ, ಬೆಂಗಳೂರು ನಗರ ನಿರ್ಮಾತೃ ಕೆಂಪೇಗೌಡರು ಧೀರೋದಾತ್ತ ನಾಯಕ, ದೂರದರ್ಶಿತ್ವವುಳ್ಳ, ರಾಜಕೀಯ ಮುತ್ಸದ್ದಿ ಹಾಗೂ ಆರ್ಥಿಕ ಚಿಂತಕರೂ ಹೌದು. 16ನೇ ಶತಮಾನದಲ್ಲಿ ಅತ್ಯುನ್ನತ ಮಾದರಿಯ ಯೋಜನಾ ಬದ್ಧ ಶೈಲಿ ನಗರವಾಗಿ ವಿಸ್ತರಣೆ ಮಾಡಿದ ಬೆಂಗಳೂರು ನಗರ ಸಂಸ್ಥಾಪಕ ಕೆಂಪೇಗೌಡರು, ನಾಡು ಮತ್ತು ಜನರ ಹಿತರಕ್ಷಣೆಗಾಗಿ ಕೆರೆ, ಕೋಟೆ ಮತ್ತು ಗುಡಿಗೋಪುರಗಳ ನಿರ್ಮಾಣದ ಜೊತೆಗೆ ನಗರ ಹಾಗೂ ಕೃಷಿ ನೀರಿನ ಸಂಪನ್ಮೂಲ ವ್ಯವಸ್ಥೆ ಮತ್ತು ವಾಣಿಜ್ಯ ನಗರವಾಗಿ ಅಭಿವೃದ್ಧಿ ಮಾಡಿದರು. ರಕ್ಷಣೆ ಮತ್ತು ಆಡಳಿತ ವ್ಯವಸ್ಥೆಯಿಂದ ಇಡೀ ನಾಡು ಶಾಂತಿ ಮತ್ತು ಸುಭಿಕ್ಷವಾಗಿರುವಂತೆ ಆಳ್ವಿಕೆ ಮಾಡಿದ ಜನಹಿತ ಕಾರ್ಯಗಳಿಂದ ಲೋಕ ಪ್ರಸಿದ್ಧಿಯಾದ ಮಾನವತಾವಾದಿ ಕೆಂಪೇಗೌಡ ನಾಡಪ್ರಭುಗಳು ಅಜರಾಮರರಾಗಿದ್ದಾರೆ ಎಂದು ಹೇಳಿದರು. ಕೆಂಪೇಗೌಡರ ಆತ್ಮಸ್ಥೈರ್ಯ, ಪರಿಶ್ರಮ ಬದ್ಧತೆ, ನೈತಿಕತೆ, ಸ್ವಾಭಿಮಾನ, ಜನಹಿತ ಇಚ್ಛಾಶಕ್ತಿ, ಅನುಪಮ ವ್ಯಕ್ತಿತ್ವದ ನಾಯಕತ್ವದ ಒಳನೋಟಗಳು ಈಗಿನ ಜನಪ್ರತಿನಿಧಿಗಳಿಗೆ ಮತ್ತು ಆಡಳಿತಗಾರರಿಗೆ ಪ್ರೇರಕಶಕ್ತಿಯಾಗಿ ಮಾದರಿಯಾಗಬೇಕಾಗಿದೆ ಎಂದು ಹೇಳಿದರು.

ಪ್ರಸ್ತುತ ವಿಶ್ವವಿಖ್ಯಾತವಾಗಿರುವ ಬೆಂಗಳೂರು, ಕರ್ನಾಟಕ ರಾಜಧಾನಿ. ಉದ್ಯಾನ ಹಾಗೂ ವಾಣಿಜ್ಯ ನಗರಿ ಹಾಗೂ ಮಾಯಾನಗರಿ ಎಂಬ ಪ್ರತೀತಿ ಬೆಂಗಳೂರಿಗಿದೆ. ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಜ್ಞಾನ ಮತ್ತು ಕೌಶಲ್ಯಗಳ ಹಾಗೂ ಐಟಿ, ಬಿ.ಟಿಗಳ ಕೇಂದ್ರ, ಆರ್ಥಿಕ ಶಕ್ತಿಯ ತೊಟ್ಟಿಲು, ಸಾಂಸ್ಕೃತಿಕ, ಸೃಜನಶೀಲ, ಚಲನಶೀಲ ಪರಂಪರೆಯ ಪ್ರಯೋಗಶೀಲತೆಯ ಸೀಮೆ ಹಾಗೂ ಪ್ರಜಾಪ್ರಭುತ್ವದ ಆಡಳಿತಾತ್ಮಕ ಅಧಿಕಾರದ ಮೈದಾನವಾಗಿದೆ. ಬಹುಭಾಷೆಗಳ, ಬಹು ಸಂಸ್ಕೃತಿಗಳ, ಬಹುವೃತ್ತಿಗಳ ಬಹುತ್ವಗಳೂರು, ಭಾರತ ಪುಟ್ಟ ಪ್ರಪಂಚ. ಸಮತೋಲನವಾದ ಹವಾಗುಣಗಳಿಂದ ಕೂಡಿದ ರಕ್ಷಿತ ಪ್ರದೇಶ ಬೆಂಗಳೂರು ಎಂದು ತಿಳಿಸಿದರು.

ನಾಡಪ್ರಭು ಕೆಂಪೇಗೌಡ ಜಯಂತಿ ಪ್ರಯುಕ್ತ ಆಯೋಜಿಸಲಾದ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಇದೇ ಸಂದರ್ಭದಲ್ಲಿ ಪುಸ್ತಕ ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ಉಪಾಧ್ಯಕ್ಷ ಡಿ.ಎನ್. ಮೈಲಾರಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಿ.ಎಂ.ಗುರುನಾಥ, ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಜಿ.ಪಿ. ಚೇತನ್, ಕಾರ್ಯದರ್ಶಿ ಎಸ್.ಜಗನ್ನಾಥ, ಗೌರವಾಧ್ಯಕ್ಷ ಪ್ರೊ.ಎನ್.ಈರಣ್ಣ, ಮುಖಂಡರಾದ ಕರಿಯಪ್ಪ, ರಮೇಶ ಗೌಡ, ಹನುಮಂತಪ್ಪ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ, ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್, ಕ್ಷೇತ್ರ ಸಮನ್ವಯಾಧಿಕಾರಿ ಸಂಪತ್ ಕುಮಾರ್ ಸೇರಿದಂತೆ ಮತ್ತಿತರರು ಇದ್ದರು. ಬೋಸೆದೇವರಹಟ್ಟಿಯ ಮಂಜಣ್ಣ ಮತ್ತು ತಂಡದವರು ಗೀತಗಾಯನ ನಡೆಸಿಕೊಟ್ಟರು. ಆಕಾಶವಾಣಿಯ ಡಾ.ನವೀನ್ ಮಸ್ಕಲ್ ನಿರೂಪಿಸಿದರು.

# ನಾಡಪ್ರಭುಕೆಂಪೇಗೌಡ ಮಹಾನ್ ಕಾರ್ಯಗಳು ಶಾಶ್ವತವಾಗಿ ಅಚ್ಚಳಿಯದೆ ಉಳಿದಿವೆ: ರಘುಮೂರ್ತಿ

» **ಚಳ್ಳಕೆರೆ**

ಕರ್ನಾಟಕದ ಬೆಂಗಳೂರು ಇಂದು ವಿಶ್ವಖ್ಯಾತಿ ಯನ್ನುಗಳಿಸಿದೆ. ಇಂತಹ ಮಹಾನ್ ನಗರವನ್ನು ನಿರ್ಮಾಣ ಮಾಡಿದ ಕೀರ್ತಿ ಕೆಂಪೇಗೌಡರಿಗೆ ಸಲ್ಲುತ್ತದೆ. ನಾಡಪ್ರಭುಕೆಂಪೇಗೌಡರ ದೂರದೃಷ್ಠಿಯಫಲವಾಗಿ ಇಂದು ನಾವು ಬೆಂಗಳೂರು ನಗರವನ್ನು ರಾಜ್ಯದಾನಿಯಾಗಿಸಿ ಆಡಳಿತ ನಡೆಸಲಾಗುತ್ತಿದೆ. ಕರ್ನಾಟಕ ರಾಜ್ಯದ ಖ್ಯಾತಿಯಲ್ಲಿ ನಾಡಪ್ರಭುಕೆಂಪೇಗೌಡರ ಹೆಸರು ಶಾಶ್ವತವಾಗಿರಲಿದೆ ಎಂದು ಕ್ಷೇತ್ರದ ಶಾಸಕ, ಕರ್ನಾಟಕ ರಾಜ್ಯ ಸಣ್ಣಕೈಗಾರಿಕೆ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಮತ್ತು ತಾಲ್ಲೂಕು ಒಕ್ಕಲಿಗರ ಸಂಘ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ನಾಡಪ್ರಭು ಕೆಂಪೇಗೌಡರ 516ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕರ್ನಾಟಕ ರಾಜ್ಯದ ಇತಿಹಾಸದಲ್ಲಿ ನಾಡಪ್ರಭು ಕೆಂಪೇಗೌಡರ ಶಾಶ್ವತಕೆಲಸ ಎಲ್ಲಾ ಸಮಾಜಕ್ಕೂ ಮಾದರಿಯಾಗಿದೆ.

ಕೆಂಪೇಗೌಡರ ಕಾರ್ಯಕೇವಲ ಒಂದೇ ಸಮುದಾಯಕ್ಕೆ ಸೀಮಿತವಾಗಿರಲಿಲ್ಲ. ಸಮಸ್ತ ಮಾನವಕುಲದ ಒಳಿತಿಗಾಗಿ ಶ್ರಮಿಸಿದ ಮಹಾನ್‌ನಾಯಕರು ಅವರು.

ಪುಟ ↘ 2



## ಪ್ರಮುಖ ಸುದ್ದಿ

# ಪತ್ರಕರ್ತರ ಭವನಕ್ಕೆ ಹೈಟೆಕ್ ಸ್ಪರ್ಶ; ಇಂದು ಲೋಕಾರ್ಪಣೆ

» **ನಮ್ಮಜನ ಸಮಾಚಾರ**

ಚಿತ್ರದುರ್ಗ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕದ ವತಿಯಿಂದ "ಚಿತ್ರದುರ್ಗ ಪತ್ರಿಕಾ ಭವನದ ನವೀಕೃತ ಹೈಟೆಕ್ ಸಭಾಭವನ ಲೋಕಾರ್ಪಣೆ" ಇದೇ ಜೂನ್ 28ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿರುವ ಪತ್ರಿಕಾಭವನದಲ್ಲಿ ನಡೆಯಲಿದೆ.

ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ಹೈಟೆಕ್ ಸಭಾಭವನದ ಉದ್ಘಾಟನೆ ನೆರವೇರಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು ಮೇಲ್ಛಾವಣೆ ಶಿಲಾನ್ಯಾಸಕ್ಕೆ ಚಾಲನೆ ನೀಡುವರು. ವಿಧಾನ ಪರಿಷತ್ ಶಾಸಕ ಕೆ.ಎಸ್.ನವೀನ್ ಮುಖ್ಯದ್ವಾರದ ಉದ್ಘಾಟನೆ ನೆರವೇರಿಸುವರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಆಶಯ ಭಾಷಣ ಮಾಡುವರು.






ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಚಿತ್ರದುರ್ಗ ಜಿಲ್ಲಾಧ್ಯಕ್ಷ ಬಿ.ದಿನೇಶ್ ಗೌಡಗೆರೆ ಅಧ್ಯಕ್ಷತೆ ವಹಿಸುವರು.

ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ.ಕಾರಜೋಳ, ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ ಎನ್.ವೈ.ಗೋಪಾಲಕೃಷ್ಣ, ಡಾ.ಎಂ. ಚಂದ್ರಪ್ಪ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ವಿಧಾನ ಪರಿಷತ್ ಶಾಸಕರಾದ ಡಿ.ಟಿ.ಶ್ರೀನಿವಾಸ್, ಚಿದಾನಂದ ಎಂ.ಗೌಡ ಭಾಗವಹಿಸುವರು. ಅತಿಥಿಗಳಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಸಿಇಒ ಎಸ್. ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಭಾಗವಹಿಸುವರು.

ಪುಟ ↘ 2

# ಗೃಹಲಕ್ಷ್ಮೀ ಫಲಾನುಭವಿಗಳು ಸ್ವಸಹಾಯ ಗುಂಪುಗಳ ವ್ಯಾಪ್ತಿಗೆ: ಡಾ.ರಂಗಸ್ವಾಮಿ

» ಚಿತ್ರದುರ್ಗ

ಗೃಹಲಕ್ಷ್ಮೀ ಯೋಜನೆಯ ಅರ್ಹ ಮಹಿಳಾ ಫಲಾನುಭವಿಗಳನ್ನು ಎಸ್.ಹೆಚ್.ಜಿ (ಸ್ವ ಸಹಾಯ ಗುಂಪು)ಗಳ ವ್ಯಾಪ್ತಿಗೆ ತಂದು ವಿಮಾ ಯೋಜನಗಳಾದ ಪಿ.ಎಂ.ಜೆ.ಜೆ.ವೈ (ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಜೀವನ್ ಬಿಮಾ ಯೋಜನೆ) ಪಿ.ಎಂ.ಎಸ್.ಬಿ.ವೈ (ಪ್ರಧಾನ ಮಂತ್ರಿ ಸುರಕ್ಷಾ ಬೀಮಾ ಯೋಜನೆ) ಹಾಗೂ ಎ.ಪಿ.ವೈ (ಅಟಲ್ ಪಿಂಚಣಿ ಯೋಜನೆ) ಅಡಿಯಲ್ಲಿ ನೊಂದಣಿ ಮಾಡಿಸಿಲಾಗುವುದು ಎಂದು ಜಿ.ಪಂ.ಉಪಕಾರ್ಯದರ್ಶಿ ಡಾ.ರಂಗಸ್ವಾಮಿ ಹೇಳಿದರು.





ನಗರದ ಜಿ.ಪಂ. ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ನೇತೃತ್ವದಲ್ಲಿ ಆಯೋಜಿಸಲಾದ 2025-26ನೇ ಸಾಲಿನ ಡಿ.ಎಲ್.ಆರ್.ಸಿ (ಜಿಲ್ಲಾ ಹಂತದ ಪುನರ್ ಪರಿಶೀಲನಾ ಸಮಿತಿ) ಹಾಗೂ ಡಿಸಿಸಿ (ಜಿಲ್ಲಾ ಸಲಹಾ ಸಮಿತಿ) ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವ-ಸಹಾಯ ಗುಂಪುಗಳ ಮೂಲಕ ಮಹಿಳೆಯರು ಸಣ್ಣ ಉದ್ದಿಮೆಗಳನ್ನು ಸ್ಥಾಪಿಸಲು ಸಹಾಯ ಧನ ಹಾಗೂ ಸಬ್ಸಿಡಿ ನೀಡಲಾಗುತ್ತಿದೆ. ಎನ್.ಆರ್.ಎಲ್.ಎಂ (ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಯೋಜನೆ) ಅಡಿ ಎಸ್.ಹೆಚ್.ಜಿ ಗುಂಪುಗಳಿಗೆ ಸಾಲ ಸೌಲಭ್ಯ ನೀಡಲಾಗುತ್ತಿದೆ.

ಈ ಗುಂಪುಗಳನ್ನು ಬ್ಯಾಂಕ್‌ಗಳೊಂದಿಗೆ ಜೋಡಿಸಿ, ಆರ್ಥಿಕ ವ್ಯವಹಾರಗಳಲ್ಲಿ ಪಾಲ್ಗೊಳ್ಳುವಂತೆ ಮಾಡಲು, ಮಹಿಳೆಯರ ಆರ್ಥಿಕ ಸಾಕ್ಷರತೆಯನ್ನು ಹೆಚ್ಚಿಸುವ ದೃಷ್ಟಿಯಿಂದ 184 ಬ್ಯಾಂಕ್ ಸಖಿಯರಿಗೆ ತರಬೇತಿ ನೀಡಲಾಗಿದೆ.

ಸದ್ಯ 10 ಬ್ಯಾಂಕ್ ಸಖಿಯರನ್ನು ನೇಮಕ ಮಾಡಿಕೊಳ್ಳಲಾಗಿದೆ. ಮುಂದಿನ ಹಂತದಲ್ಲಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಬ್ಯಾಂಕ್‌ಗಳಿಗೆ ಬ್ಯಾಂಕ್ ಸಖಿಯರನ್ನು ನೇಮಿಸಲಾಗುವುದು ಎಂದರು.

ಮೈಕ್ರೋ ಫೈನಾನ್ಸ್‌ಗಳಲ್ಲಿ ಮಹಿಳೆಯರು ಹೆಚ್ಚಿನ ಬಡ್ಡಿಗೆ ಸಾಲ ಪಡೆಯುವ ಬದಲು, ಎಸ್.ಹೆಚ್.ಜಿ ಮೂಲಕ ಸಾಲ ಪಡೆದು ಉದ್ದಿಮೆ ನಡೆಸಿ ಆರ್ಥಿಕವಾಗಿ ಸಬಲರಾಗಲು ಅವಕಾಶವಿದೆ. ಜಿಲ್ಲೆಯಲ್ಲಿ 13 ಸಾವಿರಕ್ಕೂ ಅಧಿಕ ಎಸ್.ಹೆಚ್.ಜಿ ಗಳಿದ್ದು, ಕೇವಲ 144 ಎಸ್.ಹೆಚ್.ಜಿ ಗಳು ಬ್ಯಾಂಕ್‌ಗಳಿಗೆ ಸಾಲ ಮರುಪಾವತಿ ಮಾಡದೇ ಅನುತ್ಪಾದಕ ಎನಿಸಿವೆ. ಈ ಪ್ರಮಾಣ ಬೇರೆ ಸಾಲ ವ್ಯವಹಾರಗಳಿಗೆ ಹೋಲಿಸಿದರೆ ನಗಣ್ಯ ಎನಿಸುವಷ್ಟಿದೆ. ಸಾಲ ಪಡೆದ ಎಲ್ಲ ಎಸ್.ಹೆಚ್.ಜಿಗಳು ಪ್ರಾಮಾಣಿಕವಾಗಿ ಸಾಲ ಮರು ಪಾವತಿ ಮಾಡಿವೆ. ಎನ್.ಆರ್.ಎಲ್.ಎಂ ಮೂಲಕ ಅನುತ್ಪಾದಕ ಎನಿಸಿದ 144 ಎಸ್.ಹೆಚ್.ಜಿಗಳನ್ನು ಪುನಃ ಕ್ರೀಯಾಶೀಲವಾಗಿಸಿ ಬ್ಯಾಂಕುಗಳ ಸಾಲ ಮರುಪಾತಿಗೆ ಪ್ರಯತ್ನಿಸಲಾಗುವುದು ಎಂದು ಡಾ.ರಂಗಸ್ವಾಮಿ ಹೇಳಿದರು.

2024-25ನೇ ಸಾಲಿನಲ್ಲಿ 2,423 ಎಸ್.ಹೆಚ್.ಜಿ ಗಳಿಗೆ ಸಾಲ ಸೌಲಭ್ಯ ನೀಡಿ, ಶೇ.100 ರಷ್ಟು ಗುರಿ ಸಾಧಿಸಲಾಗಿದೆ. 2025-26ನೇ ಸಾಲಿಗೆ 6,766 ಎಸ್.ಹೆಚ್.ಜಿ ಗಳಿಗೆ ಸಾಲ ಸೌಲಭ್ಯದ ಗುರಿ ನಿಗದಿ ಪಡಿಸಲಾಗಿದೆ. ಈ ಪೈಕಿ 225 ಎಸ್.ಹೆಚ್.ಜಿ ಗಳಿಗೆ ಈಗಾಗಲೇ ಸಾಲ ಸೌಲಭ್ಯ ನೀಡಲಾಗಿದೆ.

ಎಸ್.ಹೆಚ್.ಜಿ ಎಲ್ಲಾ ಸದಸ್ಯರ ಆಧಾರ್ ಹಾಗೂ ಇತರೆ ವಿವರಗಳನ್ನು ಸಂಗ್ರಹಿಸಿ ಎನ್.ಆರ್.ಎಲ್.ಎಂ ಎಂ.ಐ.ಎಸ್ ವೆಬ್ ಸೈಟ್‌ನಲ್ಲಿ ಅಳವಡಿಸಲಾಗಿದ್ದು, ಬ್ಯಾಂಕುಗಳು ಈ ಮಾಹಿತಿಯನ್ನು ಪಡೆದು ನಿರಾತಂಕವಾಗಿ ಸಾಲ ಸೌಲಭ್ಯ ಮಂಜೂರು ಮಾಡಬಹುದಾಗಿದೆ ಎಂದು ಜಿ.ಪಂ. ಕಾರ್ಯಕ್ರಮ ಅನುಷ್ಠಾನಾಧಿಕಾರಿ ಯೋಗೀಶ್ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ 16,59,456 ಜನಸಂಖ್ಯೆಯಿದ್ದು, ಪಿ.ಎಂ.ಜೆ.ಜೆ.ವೈ ಅಡಿ 2,05,924 ಪಿ.ಎಂ.ಎಸ್.ಬಿ.ವೈ ಅಡಿ 4,99,155 ಹಾಗೂ ಎ.ಪಿ.ವೈ ಅಡಿ 1,14,161 ಫಲಾನುಭವಿಗಳು ನೊಂದಣಿಯಾಗಿದ್ದಾರೆ. ಇನ್ನೂ ಸಾಕಷ್ಟು ಜನರನ್ನು ನೊಂದಣಿ ಮಾಡಲು ಅವಕಾಶವಿದೆ. ಆರ್ಥಿಕತೆ ಒಳಗೊಳ್ಳುವಿಕೆ ಮಟ್ಟ ಹೆಚ್ಚಿಸಲು ಜುಲೈ 1 ರಿಂದ ಸೆಪ್ಟಂಬರ್ 30 ವರೆಗೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ವತಿಯಿಂದ ಆಂದೋಲನ ಹಮ್ಮಿಕೊಳ್ಳಲಾಗಿದೆ. ಸ್ಥಳೀಯ ಗ್ರಾಮ ಪಂಚಾಯಿತಿಗಳ ಸಹಯೋಗದೊಂದಿಗೆ ಈ ವಿಮಾ ಯೋಜನೆಗಳ ನೊಂದಣಿ ಹೆಚ್ಚಿನ ಶ್ರಮ ವಹಿಸಬೇಕು. ಬ್ಯಾಂಕುಗಳು ಯಾವುದೇ ಕಾರಣಕ್ಕೂ ಸಾಮಾಜಿಕ ಭದ್ರತಾ ಯೋಜನೆಯಡಿ ಫಲಾನುಭವಿಗಳ ಖಾತೆ ಜಮೆಯಾಗುವ ಹಣವನ್ನು ಸಾಲದ ಕಂತಿಗೆ ವಜಾ ಮಾಡಿಕೊಳ್ಳಬಾರದು. ಕೃಷಿ, ಶಿಕ್ಷಣ, ವಸತಿ, ಸಣ್ಣ ಹಾಗೂ ಅತಿಸಣ್ಣ ಉದ್ದಿಮೆ ಹಾಗೂ ಇತರೆ ಸರ್ಕಾರದ ಯೋಜನೆಗಳಿಡಿ ಸಬ್ಸಿಡಿಯೊಂದಿಗೆ ಹೆಚ್ಚು ಸಾಲ ಸೌಲಭ್ಯಗಳನ್ನು ನೀಡಲು ವಿಳಂಬ ಮಾಡಬಾರದು ಎಂದು ಲೀಡ್ ಬ್ಯಾಂಕ್ ವ್ಯವಸ್ಥಾಪಕ ರಾಘವೇಂದ್ರ.ಎಂ ಮಾಹಿತಿ ನೀಡಿದರು.

ಜಂಟಿ ಕೃಷಿ ನಿರ್ದೇಶಕ ಮಂಜುನಾಥ ಮಾತನಾಡಿ, ಪಿ.ಎಂ.ಎಫ್.ಎಂ.ಇ(ಪ್ರಧಾನ ಮಂತ್ರಿ ಸೂಕ್ಷ್ಮ ಆಹಾರ ಸಂಸ್ಕರಣ ಉದ್ದಿಮೆಗಳ ಔಪಚಾರಿಕರಣ) ಅಡಿ ಕಳೆದ ಸಾಲಿನಲ್ಲಿ ಜಿಲ್ಲೆಯಲ್ಲಿ 100 ಘಟಕಗಳ ಗುರಿ ನಿಗದಿ ಮಾಡಲಾಗಿದೆ. ಇದರಲ್ಲಿ 88 ಅರ್ಜಿಗಳು ಸ್ವೀಕೃತವಾಗಿವೆ. 50 ಅರ್ಜಿಗಳಿಗೆ ಬ್ಯಾಂಕು ಸಾಲ ಸೌಲಭ್ಯ ದೊರಕಿದೆ. 30 ಅರ್ಜಿಗಳು ಮಂಜುರಾತಿ ಬ್ಯಾಂಕುಗಳಲ್ಲಿ ಬಾಕಿಯಿದೆ. ಪಿ.ಎಂ.ಎಫ್.ಎಂ.ಇ ಯೋಜನೆಯಡಿ ಘಟಕ ವೆಚ್ಚಕ್ಕೆ ಪಡೆಯುವ ಸಾಲ ಸೌಲಭ್ಯದ ಶೇ.35 ರಷ್ಟು ಸಬ್ಸಿಡಿಯನ್ನು ನೀಡಲಾಗುತ್ತದೆ. ಬ್ಯಾಂಕ್‌ಗಳ ಮುಂದಿರುವ ಬಾಕಿ ಅರ್ಜಿಗಳ ವಿಲೇವಾರಿ ಮಾಡುವಂತೆ ಅಧಿಕಾರಿಗಳಲ್ಲಿ ಕೋರಿದರು.

ಆರ್.ಬಿ.ಐ.ಪ್ರಬಂಧಕಅರುಣ್‌ಕುಮಾರ್ ಮಾತನಾಡಿ, ಜಿಲ್ಲೆಯಲ್ಲಿ 257 ಬ್ಯಾಂಕ್ ಶಾಖೆಗಳು ಕಾರ್ಯನಿರ್ವಹಿಸುತ್ತಿದ್ದು, ರೂ.11,193.42 ಕೋಟಿ ಠೇವಣಿ ಸ್ವೀಕರಿಸಲಾಗಿದ್ದು, ಬ್ಯಾಂಕುಗಳು ರೂ.12,596.51 ಕೋಟಿ ಸಾಲವನ್ನು ಸಾರ್ವಜನಿಕರಿಗೆ ನೀಡಿವೆ. ಜಿಲ್ಲೆಯ ಸಾಲ-ಠೇವಣಿ ಅನುಪಾತ ಪ್ರತಿಶತ 112.53% ಇದೆ. ಬ್ಯಾಂಕುಗಳು ಸರ್ಕಾರ ಹಾಗೂ ನಿಗಮ ಮಂಡಳಿಗಳ ಸಾಲ ಸೌಲಭ್ಯ ಯೋಜನೆಗಳನ್ನು ಕಾಲಮಿತಿಯಲ್ಲಿ ಮಂಜೂರು ಮಾಡಬೇಕು ಎಂದರು.

ಕೆನರಾ ಬ್ಯಾಂಕ್ ವಲಯ ಪ್ರಬಂಧಕಿ ಅನಿತಾ, ನಬಾರ್ಡ್ ಜಿಲ್ಲಾ ವ್ಯವಸ್ಥಾಪಕ ವಿನಂತ್.ಕೆ, ಕರ್ನಾಟಕ ಗ್ರಾಮೀಣ ವಿಕಾಸ ಬ್ಯಾಂಕ್ ಪ್ರಬಂಧಕ ಜನಾರ್ಧನ್, ಸೇರಿದಂತೆ ವಿವಿಧ ಬ್ಯಾಂಕ್‌ಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಐದು ಹುಲಿಗಳ ಸಾವು: ಅಧಿಕಾರಿಗಳ ಅಮಾನತಿಗೆ ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ಆಗ್ರಹ

» ಚಿತ್ರದುರ್ಗ

ಮಲೆ ಮಹದೇಶ್ವರ ವನ್ಯಜೀವಿ ಧಾಮದ ಮೀಣ್ಯಂ ಅರಣ್ಯದಲ್ಲಿ ದುಷ್ಕರ್ಮಿಗಳ ವಿಷ ಪ್ರಾಶನಕ್ಕೆ ಐದು ಹುಲಿಗಳು ಮೃತಪಟ್ಟಿದ್ದು ಇದು ವನ್ಯಜೀವಿ ಸಂರಕ್ಷಣಾ ಕ್ಷೇತ್ರದಲ್ಲಿ ನಡೆದ ಅತಿ ದೊಡ್ಡ ದುರಂತವಾಗಿದೆ.

ಈ ಹುಲಿಗಳ ಸಾವಿನ ತನಿಖೆ ಮಾಡಲು ವಿಶೇಷ ತಂಡವನ್ನು ರಚಿಸಬೇಕೆಂದು ಮತ್ತು ನಿರ್ಲಕ್ಷ್ಯವಹಿಸಿದ ಅಧಿಕಾರಿಗಳನ್ನು ಈ ಕೂಡಲೇ ಅಮಾನತು ಮಾಡಬೇಕೆಂದು ಮತ್ತು ಸಾವಿಗೆ ಕಾರಣರಾದವರ ವಿರುದ್ದ ಕ್ರಿಮಿನಲ್ ಪ್ರಕರಣ ದಾಖಲಿಸಿ ತಕ್ಕ ಶಿಕ್ಷೆ ವಿಧಿಸಬೇಕೆಂದು ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ರಾಜ್ಯ ಪ್ರಧಾನಕಾರ್ಯದರ್ಶಿ ಮಾಲತೇಶ್ ಅರಸ್ ಹಾಗೂ ಸಂಚಾಲಕರಾದ ಟಿ.ರುದ್ರಮುನಿ ಅವರು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರಾದ ಈಶ್ವರ್ ಖಂಡ್ರೆ ಅವರಿಗೆ ಆಗ್ರಹಿಸಿದ್ದಾರೆ.



ಸ್ಥಳೀಯ ಅಧಿಕಾರಿಗಳ ಬೇಜವಾಬ್ದಾರಿ, ಕಾಂಡಚಿನ ಗ್ರಾಮಗಳ ಜನರ ದ್ವೇಷಕ್ಕೆ ಅತಿ ಅಪರೂಪದ ಹುಲಿ ಕುಟುಂಬವೇ ಸರ್ವನಾಶವಾಗಿದೆ. ತಾಯಿ ಮತ್ತು ನಾಲ್ಕು ಹುಲಿಗಳ ಘೋರ ಸಾವು ವನ್ಯಜೀವಿ ಸಂರಕ್ಷಣಾ ಯೋಜನೆಗೆ ದೊಡ್ಡ ಹೊಡೆತವಾಗಿದೆ. ಕರ್ನಾಟಕ ರಾಜ್ಯ ದೇಶದಲ್ಲಿಯೇ ಹುಲಿಗಳ ಸಂಖ್ಯೆಯಲ್ಲಿ 2 ನೇ ಸ್ಥಾನದಲ್ಲಿದೆ. ಅಳಿವಿನಂಚಿನಲ್ಲಿರುವ ಹುಲಿಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ.

ಈ ಹುಲಿಗಳ ಸಾವಿನ ತನಿಖೆ ಮಾಡಲು ವಿಶೇಷ ತಂಡವನ್ನು ರಚಿಸಬೇಕೆಂದು ಮತ್ತು ನಿರ್ಲಕ್ಷ್ಯವಹಿಸಿದ ಅಧಿಕಾರಿಗಳನ್ನು ಈ ಕೂಡಲೇ ಅಮಾನತು ಮಾಡಬೇಕೆಂದು ಮತ್ತು ಸಾವಿಗೆ ಕಾರಣರಾದವರ ವಿರುದ್ದ ಕ್ರಿಮಿನಲ್ ಪ್ರಕರಣ ದಾಖಲಿಸಿ ತಕ್ಕ ಶಿಕ್ಷೆ ವಿಧಿಸಬೇಕೆಂದು ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ಮನವಿ ಮಾಡಿದೆ.

# ಕುಟೀರಕ್ಕೆ ಬೆಂಕಿ ಲಕ್ಷಾಂತರ ರೂ. ನಷ್ಟ

**ಚಳ್ಳಕೆರೆ:** ತಾಲ್ಲೂಕಿನ ಪರಶುರಾಮಪುರ ಹೋಬಳಿ ವ್ಯಾಪ್ತಿಯ ಪಿ.ಮಹದೇವರಪುರ ಗ್ರಾಮದ ಬಳಿ ಗುರುವಾರ ತಡರಾತ್ರಿ ರೈತ ಪಿಲ್ಲಹಳ್ಳಿಚಿತ್ರಲಿಂಗಪ್ಪ ಎಂಬುವವರ ಜಮೀನಿನಲ್ಲಿದ್ದ ಕುಟೀರಕ್ಕೆ ಯಾರೋಕಿಡಿಗೇಡಿಗಳು ಬೆಂಕಿಹಚ್ಚಿದ ಪರಿಣಾಮ ಕುಟೀರ ಸಂಪೂರ್ಣ ಸುಟ್ಟು ಲಕ್ಷಾಂತರ ರೂಪಾಯಿನಷ್ಟವಾಗಿದೆ ಎಂದು ರೈತ ಪಿಲ್ಲಹಳ್ಳಿಚಿತ್ರಲಿಂಗಪ್ಪ ತಿಳಿಸಿದ್ಧಾರೆ. ಅವರು ಈ ಬಗ್ಗೆ ಮಾಹಿತಿ ನೀಡಿ, ಕಳೆದ ಕೆಲವು ವರ್ಷಗಳ ಹಿಂದೆ ಜಮೀನಿನಲ್ಲಿ ವಾಸಿಸಲು ಸುಮಾರು 5ಲಕ್ಷ ವೆಚ್ಚದ ಕುಟೀರ ನಿರ್ಮಿಸಲಾಗಿತ್ತು. ಇದಲ್ಲಿದ್ದ ಕಂಪ್ಯೂಟರ್, ಟಿವಿ. ಫ್ರೀಡ್ಜ್, ಬಟ್ಟೆ, ಆಹಾರ ಪದಾರ್ಥಗಳು ಸೇರಿದಂತೆ ಮೂಲದಾಖಲಾತಿಗಳು ಬೆಂಕಿಗೆ ಆಹುತಿಯಾಗಿ ಲಕ್ಷಾಂತರ ರೂಪಾಯಿ ನಷ್ಟವಾಗಿದೆ. ಜಮೀನಿನಲ್ಲಿ ಹಾಕಿದ್ದ ಕೃಷಿಪರಿಕರಗಳು ಬೆಂಕಿಯಲ್ಲಿ ಸುಟ್ಟುಹೋಗಿದ್ದು ಅಪಾರಪ್ರಮಾಣದ ನಷ್ಟವಾಗಿದೆ. ಯಾರೋ ಕಿಡಿಗೇಡಿಗಳು ಗುರುವಾರ ರಾತ್ರಿ 1ಗಂಟೆಯ ಸಮಯದಲ್ಲಿ ಬೆಂಕಿ ಹಚ್ಚಿಹೋಗಿದ್ದಾರೆಂದು ರೈತ ಆರೋಪಿಸಿದ್ಧಾರೆ. ಸ್ಥಳಕ್ಕೆ ಪರಶುರಾಮಪುರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಗ್ರಾಮಲೆಕ್ಕಾಧಿಕಾರಿ ಮಂಜುನಾಥ ಭೇಟಿ ನೀಡಿ ನಷ್ಟದ ಅಂದಾಜು ವರದಿ ನೀಡಿದ್ಧಾರೆ.




## ಪ್ರಮುಖ ಸುದ್ದಿ

# ಪತ್ರಕರ್ತರ ಭವನಕ್ಕೆ ಹೈಟೆಕ್ ಸ್ಪರ್ಶ; ಇಂದು ಲೋಕಾರ್ಪಣೆ

» ಮೊದಲ ಪುಟದಿಂದ

**2022-2025ರಕಾರ್ಯಾಭಿವೃದ್ಧಿ:** ಹೊಸ ಬದಲಾವಣೆ ಎಂಬ ಘೋಷಣೆಯೊಂದಿಗೆ ಚಿತ್ರದುರ್ಗದಲ್ಲಿ ಕಾರ್ಯನಿರತ ಪತ್ರಕರ್ತ ಸಂಘವು ಕಾರ್ಯ ಪ್ರವೃತ್ತಿ ಆರಂಭಿಸಿತು. ಸಂಘವು ಅಧಿಕಾರ ವಹಿಸಿಕೊಂಡ ಮೇಲೆ ಅನೇಕ ಕಾರ್ಯಕ್ರಮಗಳನ್ನು ಆಯೋಜಿಸಿ ಯಶಸ್ವಿಗೊಳಿಸಿದೆ. ಅವುಗಳಲ್ಲಿ ಮುಖ್ಯವಾಗಿ ಪತ್ರಕರ್ತರಿಗೆ ಹಾಗೂ ಅವರ ಕುಟುಂಬದವರಿಗೆ ಆರೋಗ್ಯ ತಪಾಸಣೆ ಶಿಬಿರ, ನೇತ್ರ ತಪಾಸಣಾ ಶಿಬಿರ, ಮರಣ ಹೊಂದಿದ ಪತ್ರಕರ್ತರ ಕುಟುಂಬಕ್ಕೆ ಆರ್ಥಿಕ ನೆರವು, ಕೋವಿಡ್ ಸಮಯದಲ್ಲಿ ಮೃತಪಟ್ಟ ಕ್ಯಾಮರಾಮ□□ಗಳಾದ ವಿನಯ್ ಮತ್ತು ಬಸವರಾಜ್ ಕೋಟಿ ಕುಟುಂಬಗಳಿಗೆ ತಲಾ ಒಂದೊಂದು ಲಕ್ಷ ನೀಡಿದ್ದೇವೆ. ಇಂಡಿಯಾನ ಹಾರ್ಟ್ ಸಂಸ್ಥೆ ಸಹಯೋಗದಲ್ಲಿ ಪತ್ರಕರ್ತರಿಗೆ ಹೃದಯ ತಪಾಸಣಾ ಶಿಬಿರ ನಡೆಸಲಾಯಿತು. ಅನಾರೋಗ್ಯಕ್ಕೆ ತುತ್ತಾದ ಪತ್ರಕರ್ತ ಕೆಲವರಿಗೆ ಸಿ.ಎಂ. ಪರಿಹಾರ ನಿಧಿಯಿಂದ ರಾಜ್ಯ ಸಮಿತಿ ಸಹಯೋಗದೊಂದಿಗೆ ಪರಿಹಾರಧನ ಕೊಡಿಸಲಾಯಿತು. ಇದೇ ಮೊದಲ ಬಾರಿಗೆ ಸಂಘದ ವತಿಯಿಂದ ಸಂವಿಧಾನ ಶಿಲ್ಪಿ ಹಾಗೂ ಪತ್ರಕರ್ತರಾಗಿದ್ದ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಲಂಕೇಶ್ ಪತ್ರಿಕೆ ಸಂಪಾದಕರು, ವಿಮರ್ಶಕರು ಕವಿಗಳಾಗಿದ್ದು, ಪಿ.ಲಂಕೇಶ್ ಅವರ ಸ್ಮರಣಾರ್ಥ ಕಾರ್ಯಕ್ರಮ ನಡೆಸಲಾಯಿತು. ಚಿತ್ರದುರ್ಗದಲ್ಲಿ ರಾಜ್ಯಮಟ್ಟದ ದತ್ತಿನಿಧಿ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ ಮಾಡಿದ್ದು, ಕಾರ್ಯಕ್ರಮಕ್ಕೆ ರಾಷ್ಟ್ರಮಟ್ಟದ ಮ್ಯಾಗ್ಸಸ್ಸೆ ಪ್ರಶಸ್ತಿ ಪುರಸ್ಕೃತ ಪಿ.ಸಾಯಿನಾಥ್ ಅವರನ್ನು ಆಹ್ವಾನಿಸಿ ಅವರಿಂದ ಪತ್ರಿಕೋದ್ಯಮದ ಬಗ್ಗೆ ವಿಚಾರ ವಿನಿಮಯ ಮಾಡಿಕೊಳ್ಳಲಾಯಿತು.






ವಿಭಾಗೀಯ ಮಟ್ಟದ ಕ್ರಿಕೆಟ್ ಪಂದ್ಯಾವಳಿ ನಡೆಸಿ, ಕ್ರಿಕೆಟ್ ಪಂದ್ಯಾವಳಿಯಲ್ಲಿ ಉಳಿದ ಹಣದಲ್ಲಿ ಕೋವಿ□□ನಿಂದ ಮೃತಪಟ್ಟ ಇಬ್ಬರು ಕ್ಯಾಮೆರಾಮ□□ಗಳ ಕುಟುಂಬಕ್ಕೆ ತಲಾ ರೂ.1 ಲಕ್ಷ ಆರ್ಥಿಕ ನೆರವು ಕಲ್ಪಿಸಲಾಯಿತು. ಪತ್ರಿಕಾ ದಿನಾಚಣೆ ಸಂದರ್ಭದಲ್ಲಿ 25 ಜನ ನಿವೃತ್ತ ಪತ್ರಕರ್ತರ ಸನ್ಮಾನಿಸಿ ಗೌರವ ಸಮರ್ಪಣೆ ಮಾಡಲಾಯಿತು.

ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಅವರ ಅವಧಿ 2022-23ನೇ ಸಾಲಿನಲ್ಲಿ ಸ್ಥಳೀಯ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿರೂ.5ಲಕ್ಷಮಂಜೂರಾತಿ, ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರ ಸ್ಥಳೀಯ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ 2024-25ನೇ ಸಾಲಿನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದ ಅಭಿವೃದ್ಧಿ ಪಡಿಸುವ ಕಾಮಗಾರಿಗೆ ರೂ.10 ಲಕ್ಷ ಅನುದಾನ ಹಾಗೂ ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಅವರ ರೂ.5 ಲಕ್ಷ ಅನುದಾನ ಹಾಗೂ 2024-25ನೇ ಸಾಲಿನ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್ ವತಿಯಿಂದ ಕಾರ್ಯನಿರತ ಪತ್ರಕರ್ತರ ಭವನದ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗೆ ರೂ.25 ಲಕ್ಷ ಅನುದಾನದಲ್ಲಿ ಪತ್ರಕರ್ತರ ಭವನದ ನವೀಕರಣ AC/with accestic ಮಾಡಿ ಸುಂದರ ವಿನ್ಯಾಸ ಮಾಡಲಾಗಿದೆ.

ಜಿಲ್ಲೆಯ ತಾಲ್ಲೂಕು ಘಟಕಗಳಾದ ಹೊಳಲ್ಕೆರೆ ಪತ್ರಿಕಾ ಭವನ ಉದ್ಘಾಟನೆ ಸಿದ್ಧಗೊಂಡಿದೆ.

ಮೊಳಕಾಲ್ಮೂರು ತಾಲ್ಲೂಕಿನಲ್ಲಿ ಪತ್ರಿಕಾ ಭವನ ನಿರ್ಮಾಣ ಅಂತಿಮ ಹಂತದಲ್ಲಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕ ಪ್ರಕಟಣೆ ತಿಳಿಸಿದೆ.

## ಅಹೋಬಳತಿಗೆ ವಿಶೇಷ ಸನ್ಮಾನ

ಜಿಲ್ಲೆಯ ಇತಿಹಾಸದಲ್ಲಿ ಮೊದಲ ಬಾರಿಗೆ ರಾಜ್ಯ ಸರ್ಕಾರದಿಂದ ಕರ್ನಾಟಕ ಮಾಧ್ಯಮ ಅಕಾಡೆಮಿ ಸದಸ್ಯರಾಗಿ ಆಯ್ಕೆಯಾಗಿದಂತಹ ವಿಜಯ ಕರ್ನಾಟಕ ಪತ್ರಿಕೆಯ ವಿಶೇಷ ವರದಿಗಾರರಾಗಿರು ಎಂ.ಎನ್.ಅಹೋಬಳಪತಿ ಅವರಿಗೆ ವಿಶೇಷ ಸನ್ಮಾನ ನಡೆಯಲಿದೆ.

## ಫಾಸ್ಟ್ ನ್ಯೂಸ್

### ನಾಡಪ್ರಭುಕೆಂಪೇಗೌಡ ಮಹಾನ್ ಕಾರ್ಯಗಳು ಶಾಶ್ವತವಾಗಿ ಅಚ್ಚಳಿಯದೆ ಉಳಿದಿವೆ: ಟಿ.ರಘುಮೂರ್ತಿ

ಕೆಂಪೇಗೌಡರ ಆದರ್ಶಗಳು ನಮ್ಮೆಲ್ಲರಿಗೂ ಸ್ಪೂರ್ತಿ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಾಲ್ಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಚನ್ನಕೇಶವ, ನಾಡಪ್ರಭುಕೆಂಪೇಗೌಡರ ಇತಿಹಾಸವನ್ನು ಎಲ್ಲರೂ ಅರಿತಿದ್ದೇವೆ. ಇಂದಿಗೂ ಸಹ ಅವರು ಮಾಡಿದ ಮಹಾನ್‌ಕಾರ್ಯಗಳ ಬಗ್ಗೆ ಜನರು. ಪ್ರತಿವರ್ಷ ಕೆಂಪೇಗೌಡ ಜಯಂತಿ ಮೂಲಕ ಅವರ ಸಾಧನೆಗಳನ್ನು ನೆನಪಿಸಿಕೊಳ್ಳುವ ಅವಕಾಶವನ್ನು ರಾಜ್ಯ ಸರ್ಕಾರ ಮಾಡಿಕೊಟ್ಟಿದೆ ಎಂದರು.

ತಹಶೀಲ್ದಾರ್ ರೇಹಾನ್‌ಪಾಷ, ಇಒ ಶಶಿಧರ, ಪೌರಾಯುಕ್ತ ಜಗರೆಡ್ಡಿ, ನಗರಸಭೆಪ್ರಭಾರ ಅಧ್ಯಕ್ಷೆ ಸಿ.ಕವಿತಾಬೋರಯ್ಯ, ಸದಸ್ಯರಾದ ಮಂಜುಳಾ, ಶಿಲ್ಪ, ರಮೇಶ್‌ಗೌಡ, ವೀರಭದ್ರಪ್ಪ, ಮುಖಂಡರಾದ ಎಂ.ರವೀಶ್, ಲಿಂಗೇಗೌಡ, ಬೆಳಗೆರೆಚಂದ್ರಣ್ಣ, ಹೆಗ್ಗೆರೆ ಆನಂದಪ್ಪ, ಚಿದಾನಂದಪ್ಪ, ಶಿವಣ್ಣ, ಗೋವರ್ಧನ, ಕಲಮರಹಳ್ಳಿಚಂದ್ರಣ್ಣ, ಪ್ರಸಾದ್, ಮಧು, ಒ.ಟಿ.ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

### ಎಂ.ರಾಕೇಶ್‌ಗೆ ಅಪ್ಪು ಯುವರತ್ನ ರಾಜ್ಯ ಪ್ರಶಸ್ತಿ

» ಹೊಸದುರ್ಗ

ಕಲ್ಯಾಣ ಕರ್ನಾಟಕ ವೇದಿಕೆ ಚಿತ್ರದುರ್ಗ ಜಿಲ್ಲಾ ಘಟಕದ ವತಿಯಿಂದ ಕೊಡಮಾಡಲ್ಪಡುವ ಅಪ್ಪು ಯುವರತ್ನ ರಾಜ್ಯ ಪ್ರಶಸ್ತಿಯನ್ನು (ಯುವ ಚಿತ್ರಕಲಾ ಕಲಾರತ್ನ) ಪಟ್ಟಣದ ಎಸ್.ನಿಜಲಿಂಗಪ್ಪ ಪಿ.ಯು.ಕಾಲೇಜಿನ ಪ್ರಥಮ ವರ್ಷದ ವಿದ್ಯಾರ್ಥಿ ಎಂ.ರಾಕೇಶ್‌ಗೆ ನೀಡಿ ಸನ್ಮಾನಿಸಿ ಗೌರವಿಸಲಾಗುವುದು ಎಂದು ವೇದಿಕೆಯ ಜಿಲ್ಲಾಧ್ಯಕ್ಷ ಡಾ:ಚಂದ್ರು ಕಲಾವಿದ ತಿಳಿಸಿದ್ದಾರೆ. ಚಿತ್ರಕಲಾ ವಿಭಾಗದಲ್ಲಿ ಸಾಧನೆ ಮಾಡಿರುವುದಕ್ಕೆ ಈ ಪ್ರಶಸ್ತಿಯನ್ನ ನೀಡಿ ಗೌರವಿಸಲಾಗುತ್ತಿದ್ದು ಜೂನ್ 29 ರಂದು ಭಾನುವಾರ ಪಟ್ಟಣದ ಅಶೋಕ ರಂಗಮಂದಿರದಲ್ಲಿ ನಡೆಯಲಿರುವ ಡಾ: ಪುನಿತ್‌ರಾಜ್‌ಕುಮಾರ್ ಸವಿ ನೆನಪಿಗಾಗಿ 2 ನೇ ವರ್ಷದ ಸಂಗೀತ ಸಂಭ್ರಮ ಕಾರ್ಯಕ್ರಮ ಹಾಗೂ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ರಾಕೇಶ್ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸುಮಾರು 50 ಕ್ಕೂ ಸಾಧಕರಿಗೆ ಪ್ರಶಸ್ತಿ ನೀಡಿ ಪುರಸ್ಕರಿಸಲಾಗವುದು ಎಂದರು. ಚಿತ್ರಕಲಾ ವಿಭಾಗದಲ್ಲಿ ರಾಜ್ಯ ಪ್ರಶಸ್ತಿಯನ್ನ ಪಡೆಯಲಿರುವ ಎಂ.ರಾಕೇಶ್ ಸಾಹಿತಿ ಹಾಗೂ ಹಿರಿಯ ಪತ್ರಕರ್ತ ನಾಗತಿಹಳ್ಳಿಮಂಜುನಾಥ್ ಹಾಗೂ ಶ್ರೀಮತಿರಾಧಮಂಜುನಾಥ್ ಅವರ ಪುತ್ರ.

### ಬಾಲ್ಯವಿವಾಹ ತಡೆ ಕುರಿತು ಪ್ರಬಂಧ ಸ್ಪರ್ಧೆ ಇಂದಿನಿಂದ ಚಾಲನೆ

» ಚಳ್ಳಕೆರೆ

ತಾಲ್ಲೂಕು ಕಾನೂನು ಸೇವಾಸಮಿತಿ, ಪೊಲೀಸ್ ಇಲಾಖೆ, ವಕೀಲರ ಸಂಘ, ಮಹಿಳಾ ಮತ್ತುಮಕ್ಕಳ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಸಹಯೋಗದಲ್ಲಿ ಬಾಲ್ಯವಿವಾಹ ತಡೆ ಕುರಿತು ಅರಿವುಮೂಡಿಸುವ ಕುರಿತು ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ತಾಲ್ಲೂಕು ಮಟ್ಟದ ಪ್ರಬಂಧ ಸ್ಪರ್ಧೆಯನ್ನು ಎರಡು ಹಂತಗಳಲ್ಲಿ ನಡೆಸಲಾಗುವುದು. ಮೊದಲನೇ ಹಂತ ಜೂನ್ 28ರ ಶನಿವಾರ ಆಯಾ ಪ್ರೌಢಶಾಲೆಗಳಲ್ಲಿ ನಡೆಸಲು ಸೂಚಿಸಲಾಗಿದ್ದು ಇದರಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ಜುಲೈ12ರಂದು ಇಲ್ಲಿನ ಎಚ್‌ಟಿಟಿ ಬಾಲಕಿಯರ ಪ್ರೌಢಶಾಲೆಯಲ್ಲಿ ನಡೆಯಲಿದೆ.

### ಪ್ರತಿಭಾ ಪುರಸ್ಕಾರಕ್ಕೆ ಅಲಕ್ಷಿತ ಸಣ್ಣ ಸಮುದಾಯಗಳ ಮಹಾ ವೇದಿಕೆಯಿಂದ ಅರ್ಜಿ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಅಲಕ್ಷಿತ ಸಣ್ಣ ಸಮುದಾಯಗಳ ಮಹಾವೇದಿಕೆ (ರಿ) ಯಿಂದ ಪ್ರತಿವರ್ಷದಂತೆ ಈ ವರ್ಷವೂ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪ್ರಸ್ತುತ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಶೇ. 85 ರಷ್ಟು ಹಾಗೂ ಪಿ.ಯು.ಸಿಯಲ್ಲಿ ಶೇ.80 ಕ್ಕಿಂತಲೂ ಹೆಚ್ಚು ಅಂಕಗಳಿಸಿರುವ ಹಿಂದುಳಿದ ಸಣ್ಣ ಸಮುದಾಯಗಳಿಗೆ ಸೇರಿರುವ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಜುಲೈ 10 ಕಡೆ ದಿನಾಂಕವಾಗಿದ್ದು, ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳು ತಮ್ಮ ಅಂಕಪಟ್ಟಿ ನಕಲು, ಭಾವಚಿತ್ರ ಹಾಗೂ ವಿಳಾಸ ದೃಢೀಕರಣ ಪತ್ರದೊಂದಿಗೆ ಅರ್ಜಿ ಸಲ್ಲಿಸಬಹುದು. ಆಯ್ಕೆಯಾದ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಜಿಲ್ಲಾ ಮಟ್ಟದ ಕಾರ್ಯಕ್ರಮದಲ್ಲಿ ಸನ್ಮಾನಿಸಿ ಗೌರವಿಸಲಾಗುವುದು. ಜೊತೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ವಿದ್ಯಾರ್ಥಿಗಳಿಗೆ ವಿಶೇಷ ಪುರಸ್ಕಾರವೂ ಇರುವುದು. ಅರ್ಜಿಗಳನ್ನು ನೇರವಾಗಿ ಅಥವ ಅಂಚೆ, ಕೋರಿಯರ್ ಮೂಲಕ ಸಲ್ಲಿಸಬಹುದು. ಅರ್ಜಿ ಸಲ್ಲಿಸುವ ವಿಳಾಸ; ಟಿ.ತಿಪ್ಪೇಸ್ವಾಮಿ ಸಂಪಿಗೆ, ಅಧ್ಯಕ್ಷರು, ಅಲಕ್ಷಿತ ಸಣ್ಣ ಸಮುದಾಯಗಳ ಮಹಾವೇದಿಕೆ (ರಿ), ಕನ್ನಡ ಸಂಪಿಗೆ ನಿಲಯ, ವೇಮನ ನಗರ, ಪ್ರಸಾದ್ ಆಸ್ಪತ್ರೆ ಬಳಿ, ಚಳ್ಳಕೆರೆ ರಸ್ತೆ, ಚಿತ್ರದುರ್ಗ-577501. ವಿವರಗಳಿಗೆ ಮೊಬೈಲ್ ಸಂಖ್ಯೆ; 9731338670 ಸಂಪರ್ಕಿಸಲು ಕೋರಲಾಗಿದೆ.

# ದೇವನಹಳ್ಳಿ ರೈತರ ಬಂಧನ ವಿರೋಧಿಸಿ ಪ್ರತಿಭಟನೆ

» **ಚಿತ್ರದುರ್ಗ**

ಬಲವಂತವಾಗಿ ರೈತರ ಭೂಮಿಯನ್ನು ಸ್ವಾಧಿನಪಡಿಸಿಕೊಳ್ಳುವ ರಾಜ್ಯ ಸರ್ಕಾರದ ದೌರ್ಜನ್ಯ ವಿರೋಧಿಸಿ ದೇವನಹಳ್ಳಿಯಲ್ಲಿ ಕಳೆದ 25 ರಂದು ಹೋರಾಟ ನಡೆಸಿದ ರೈತರನ್ನು ಬಂಧಿಸಿರುವುದನ್ನು ಖಂಡಿಸಿ ಭಾರತ ಕಮ್ಯುನಿಸ್ಟ್ ಪಕ್ಷ(ಮಾರ್ಕ್ಸ್‌ವಾದಿ)ದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಶುಕ್ರವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಪ್ರವಾಸಿ ಮಂದಿರದಿಂದ ಮೆರವಣಿಗೆ ಮೂಲಕ ಆಗಮಿಸಿದ ಪ್ರತಿಭಟನಾಕಾರರು ಬಂಧಿಸಿರುವ ರೈತರನ್ನು ಕೂಡಲೆ ಬಿಡುಗಡೆಗೊಳಿಸುವಂತೆ ರಾಜ್ಯದ ಮುಖ್ಯಮಂತ್ರಿ ವಿರುದ್ದ ಧಿಕ್ಕಾರಗಳನ್ನು ಕೂಗಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಜಿಲ್ಲಾ ಸದಸ್ಯ ಡಿ.ಎಂ. ಮಲಿಯಪ್ಪ ಕಾರ್ಪೊರೇಟ್ ಕಂಪನಿ, ಭೂ ಮಾಲೀಕರ ಪರವಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ದೇವನಹಳ್ಳಿ ಸಮೀಪವಿರುವ ಚನ್ನರಾಯಪಟ್ಟಣದ ಸುತ್ತಮುತ್ತ ಹದಿಮೂರು ಹಳ್ಳಿಗಳಲ್ಲಿ ರೈತರ ಜಮೀನ ವಶಪಡಿಸಿಕೊಳ್ಳುವುದಕ್ಕೆ




ಅಂಕಿತ ಹಾಕಲು ಮುಂದಾಗಿರುವುದನ್ನು ನೋಡಿದರೆ ಐವತ್ತು ವರ್ಷಗಳ ಹಿಂದೆ ಪ್ರಧಾನಿ ಇಂದಿರಾಗಾಂಧಿ ತುರ್ತು ಪರಿಸ್ಥಿತಿ ಹೇರಿದ್ದು ನೆನಪಾಗುತ್ತದೆ. ರೈತರು, ಕಾರ್ಮಿಕರು, ಮಹಿಳೆಯರು, ವಿದ್ಯಾರ್ಥಿಗಳ ಪರವಾಗಿರಬೇಕಾಗಿದ್ದ ರಾಜ್ಯ ಸರ್ಕಾರ ಉದ್ಯಮಿಗಳ ಪರವಾಗಿದೆ. ಕೃಷಿ ಭೂಮಿಯನ್ನು ಉಳಿಸಿಕೊಳ್ಳಲು 1180 ದಿನಗಳಿಂದ ಮುಷ್ಕರ ನಡೆಸುತ್ತಿರುವ ರೈತರು, ಮಹಿಳೆಯರನ್ನು ಕಡೆಗಣಿಸಿದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡಬೇಕಾದಿತೆಂದು ಎಚ್ಚರಿಸಿದರು.

ಪೊಲೀಸರ ಮೂಲಕ ರೈತರು, ಮಹಿಳೆಯರ ಮೇಲೆ ದೌರ್ಜನ್ಯವೆಸಗಿದರೆ ನಾವುಗಳು ಸಹಿಸುವುದಿಲ್ಲ. ಬಂಧಿತ ರೈತರನ್ನು ಕೂಡಲೆ ಬಿಡುಗಡೆಗೊಳಿಸಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಬೇಕಾಗುತ್ತದೆಂದರು.

ನಿಂಗಮ್ಮ ಮಾತನಾಡುತ್ತ ದೇವನಹಳ್ಳಿಯಲ್ಲಿ ಹೋರಾಟ ನಡೆಸಿದ ರೈತರು, ಮಹಿಳೆಯರು ಹಾಗೂ ಕಾರ್ಮಿಕರಿಗೆ ರಾಜ್ಯ ಸರ್ಕಾರ ಅಪಮಾನವೆಸಗಿದೆ. ಬಲವಂತವಾಗಿ ರೈತರ ಭೂಮಿಯನ್ನು ವಶಪಡಿಸಿಕೊಳ್ಳುವ ಅಧಿಕಾರ ರಾಜ್ಯದ ಮುಖ್ಯಮಂತ್ರಿಗಿಲ್ಲ. ಬಂಧಿಸಿರುವ ರೈತರನ್ನು ತಕ್ಷಣವೆ ಬಿಡುಗಡೆಗೊಳಿಸಬೇಕು. ಇಲ್ಲವಾದಲ್ಲಿ ದೊಡ್ಡಹೋರಾಟನಡೆಸಬೇಕಾಗುತ್ತದೆಂದು ಗಡುವು ನೀಡಿದರು.

ಸಿ.ಕೆ.ಗೌಸ್‌ಪೀರ್ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿ ಭೂಮಿ ಸ್ವಾಧೀನ ವಿರೋಧಿಸಿ ದೇವನಹಳ್ಳಿಯಲ್ಲಿ ಹೋರಾಟ ನಡೆಸುತ್ತಿದ್ದ ರೈತರು, ಸಿ.ಐ.ಟಿ.ಯು.ಮುಖಂಡರುಗಳನ್ನು ರಾಜ್ಯ ಸರ್ಕಾರ ಬಂಧಿಸಿ ದಬ್ಬಾಳಿಕೆ ನಡೆಸುತ್ತಿದೆ. ಭೂಮಿ ನಮ್ಮ ಹಕ್ಕು ಯಾವುದೇ ಕಾರಣಕ್ಕೂ ವಶಪಡಿಸಿಕೊಳ್ಳಲು ಬಿಡುವುದಿಲ್ಲ. ಕೇಂದ್ರ ಬಿಜೆಪಿ. ಹಾಗೂ ರಾಜ್ಯ ಕಾಂಗ್ರೆಸ್ ಸರ್ಕಾರ ಎರಡು ರೈತ ಹಾಗೂ ಕಾರ್ಮಿಕ ವಿರೋಧಿಗಳಾಗಿವೆ ಎಂದು ದೂರಿದರು.

ಜಿಲ್ಲಾ ಸದಸ್ಯ ಟಿ.ತಿಪ್ಪೇಸ್ವಾಮಿ ಮಾತನಾಡುತ್ತ ಅಹಿಂದ ನಾಯಕ ಎಂದು ಹೇಳಿಕೊಳ್ಳುತ್ತಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮುಖವಾಡ ಕಳಚಿದೆ. ರೈತರು ಕಾರ್ಮಿಕರು, ಮಹಿಳೆಯರ ವಿರೋಧಿಯಾಗಿದ್ದಾರೆ. ಕೇಂದ್ರ ಸರ್ಕಾರ ಧರ್ಮದ ಹೆಸರಿನಲ್ಲಿ ರಾಜಕೀಯ ಮಾಡುತ್ತಿದೆ. ರಾಜ್ಯ ಸರ್ಕಾರ ಉಚಿತ ಗ್ಯಾರೆಂಟಿಗಳ ಮೇಲೆ ರಾಜಕೀಯ ಬೇಳೆಕಾಳು ಬೇಯಿಸಿಕೊಳ್ಳುತ್ತಿದೆ. ಬಂಧಿಸಿರುವ ರೈತರು, ಸಿ.ಐ.ಟಿ.ಯು. ಮುಖಂಡರುಗಳನ್ನು ಬಿಡುಗಡೆಗೊಳಿಸದಿದ್ದರೆ ಮುಂದೆ ದೊಡ್ಡ ಹೋರಾಟ ಮಾಡಬೇಕಾಗುತ್ತದೆಂದರು.

ಟಿ.ನಿಂಗಣ್ಣ, ಹೆಚ್.ಓ.ನಾಗರಾಜ್, ನಿರ್ಮಲ, ಮಂಜಮ್ಮ, ಕಲ್ಯಾಣಮ್ಮ, ಸೀಬಾ, ಆಶಾ, ರೇಣುಕ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಮಾದಕ ವ್ಯಸನಮುಕ್ತ ದಿನಾಚರಣೆ: ಜಾಥಾ

» **ದಾವಣಗೆರೆ**

ನಗರದ ಹೈಸ್ಕೂಲ್ ಮೈದಾನದಲ್ಲಿ ಪೊಲೀಸ್ ಇಲಾಖೆ ವತಿಯಿಂದ ಏರ್ಪಡಿಸಲಾದ ಅಂತರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನಾಚರಣೆ ಅಂಗವಾಗಿ ಮಾದಕ ದ್ರವ್ಯ ವಿರೋಧಿ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಡಿ.ಕೆ.ವೇಲಾ ಹಾಗೂ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಚಾಲನೆ ನೀಡಿದರು.

ಜಾಥಕ್ಕೆ ಚಾಲನೆ ನೀಡಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ವೇಲಾ ಡಿ.ಕೆ ಮಾತನಾಡಿ, ಮಾದಕ ವಸ್ತುಗಳ ಸಾಗಣೆ, ಸೇವನೆಯ ಪ್ರಕರಣಗಳು ಜಿಲ್ಲೆಯಲ್ಲಿ ಹೆಚ್ಚಾಗುತ್ತಿವೆ. ವಿದ್ಯಾರ್ಥಿಗಳು, ಯುವಕರು ಗಾಂಜಾ, ಅಫೀಮು, ಮದ್ಯ ಇಂತಹ ದುಶ್ಚಟಗಳನ್ನು ನಿಯಂತ್ರಿಸುವ ಸಲುವಾಗಿ ಈ ದಿನವನ್ನು ಆಯೋಜಿಸಲಾಗಿದೆ. ವಿದ್ಯಾರ್ಥಿಗಳು ತಮ್ಮ ಜೀವನ ರೂಪಿಸಿಕೊಳ್ಳುವ ಸಾಮರ್ಥ್ಯ ನಿಮ್ಮ ಕೈಲಿದೆ. ಅದನ್ನು ಸರಿಯಾದ ಮಾರ್ಗದಲ್ಲಿ ಆಯ್ಕೆ ಮಾಡಿಕೊಂಡಾಗ ನಿಮ್ಮ ಭವಿಷ್ಯದ ಜೀವನ ಪ್ರಜ್ವಲಿಸಲಿದೆ. ಮಾದಕ ವಸ್ತುಗಳ ಸೇವನೆಯಿಂದ ಭವಿಷ್ಯದ ಜೀವನವೇ ಸರ್ವನಾಶವಾಗಲಿದೆ. ಆದ್ದರಿಂದ ಇಂತಹ ಮಾದಕ ವಸ್ತುಗಳ ದುಶ್ಚಟಗಳಿಂದ ದೂರವಿದ್ದು, ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದ ಅವರು, ತಮ್ಮ ಜೊತೆಗಿರುವ ಹಾಗೂ ಅಕ್ಕ ಪಕ್ಕದಲ್ಲಿನವರಿಗೂ ಈ ಬಗ್ಗೆ ಅರಿವು ಮೂಡಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾಧಿಕಾರಿ ಜಿ. ಎಂ.ಗಂಗಾಧರಸ್ವಮಿ ಮಾತನಾಡಿ, ಮಾದಕ ದ್ರವ್ಯ, ಸೇವನೆ ಮತ್ತು



ಅದಕ್ಕೆ ಪ್ರೇರೇಪಿಸುವರೋ ಅಂಥವರನ್ನೂ ತುಂಬಾ ಹತ್ತಿರದಿಂದ ಗಮನಿಸುತ್ತಿರುವುದಲ್ಲದೆ, ಪೊಲೀಸ್ ಇಲಾಖೆ ವತಿಯಿಂದ ಹದ್ದಿನ ಕಣ್ಣಿಡಲಾಗಿದೆ. ನಗರದಾದ್ಯಂತ 500 ಕ್ಕೂ ಅಧಿಕ ಸಿಸಿ ಕ್ಯಾಮರಾ ಅಳವಡಿಸಲಾಗಿದೆ. ಪ್ರತಿಯೊಬ್ಬ ವ್ಯಕ್ತಿಯೂ ಕೂಡ ಕನಿಷ್ಠ 20 ಬಾರಿ ವ್ಯವಸ್ಥೆಗೆ ಕಾಣಸಿಗುತ್ತವೆ. ವಿಶೇಷವಾಗಿ ಶಾಲಾ, ಕಾಲೇಜುಗಳ ಸುತ್ತಮುತ್ತ ಹದ್ದಿನ ಕಣ್ಣಿಡಲಾಗಿದೆ. ಆದ್ದರಿಂದ ವಿದ್ಯಾರ್ಥಿಗಳು ಇಂತಹ ಪ್ರಕರಣಗಳಲ್ಲಿ ಸಿಲುಕಿಕೊಂಡಲ್ಲಿ ಭವಿಷ್ಯದ ಜೀವನ ಕಷ್ಟಕರವಾಗಲಿದೆ. ವಿದ್ಯಾರ್ಥಿಗಳು ದುಶ್ಚಟಗಳ ಪ್ರಭಾವಕ್ಕೆ ಒಳಗಾಗದೆ, ಮಾದಕ ದ್ರವ್ಯ ಬಳಕೆ ಮಾರಾಟ ಕುರಿತು ಮಾಹಿತಿ ಕಂಡು ಬಂದಲ್ಲಿ 1933 ಅಥವಾ 112 ಸಂಖ್ಯೆಗೆ ಕರೆ ಮಾಡಿ ಮಾಹಿತಿ ನೀಡಬಹುದು. ಮಾಹಿತಿ ನೀಡಿದವರ ವಿವರ ಗೌಪ್ಯವಾಗಿಡಲಾಗುವುದು.

ಮಕ್ಕಳು ವಿದ್ಯಾರ್ಥಿಗಳು ಮದ್ಯ, ಮಾದಕ ಸೇವನೆ ಮುಕ್ತ ಸಮಾಜ ನಿರ್ಮಿಸಲು ಸಹಕರಿಸಬೇಕು. ಪೋಷಕರ ನಂಬಿಕೆಗೆ ದ್ರೋಹ ಮಾಡದೆ ದೇಶ, ಸಮಾಜಕ್ಕೆ ಉತ್ತಮ ವ್ಯಕ್ತಿಗಳಾಗಿ ಬಾಳಬೇಕು ಎಂದರು.ಜಾಥವು ಹೈಸ್ಕೂಲ್ ಮೈದಾನದಿಂದ ರೇಣುಕಾ ಮಂದಿರದವರೆಗೆ ಸಾಗಿ ರೇಣುಕಾ ಮಂದಿರ ವೃತ್ತದ ಬಳಿ ಜೈನ್ ವಿದ್ಯಾಲಯದ ವಿದ್ಯಾರ್ಥಿಗಳಿಂದ ಮದ್ಯ, ಮಾದಕ ದ್ರವ್ಯ ವಿರೋಧಿ ದಿನಾಚರಣೆ ಅಂಗವಾಗಿ ಕಿರು ನಾಟಕ ಪ್ರದರ್ಶಿಸಲಾಯಿತು. ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿ.ಪಂ ಸಿ.ಇ .ಓ ಗಿತ್ತೆ ಮಾಧವ ವಿಠ್ಠಲ ರಾವ್, ಹಿರಿಯ ಸಿವಿಲ್ ನ್ಯಾಯಾಧೀಶ ಮಹಾವೀರ್ ಮ. ಕರೆಣ್ಣವರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್, ಡಿಡಿಪಿಯು ಕರಿಸಿದ್ದಪ್ಪ, ಡಿಡಿಪಿಐ ಕೊಟ್ರೇಶ್ ಇದ್ದರು.

## ದುರ್ಗೋತ್ಸವ ಆಚರಿಸಲು ಸರ್ಕಾರ ಅವಕಾಶ ನೀಡಬೇಕು: ಶಿವಕುಮಾರ್



» **ಚಳ್ಳಕೆರೆ**

ಗಂಡುಮೆಟ್ಟಿನ ನಾಡು ಚಿತ್ರದುರ್ಗದ ಏಳುಕೋಟೆಸುತ್ತಿನ ಕೋಟೆಯನ್ನು ನಿರ್ಮಿಸಿದ ವೀರಮದಕರಿನಾಯಕರ ಮಹಾನ್ ಸಾಧನೆಗಳನ್ನು ಜನತೆಗೆ ತಿಳಿಸುವ ಸಲುವಾಗಿ ಸರ್ಕಾರ ಈ ಹಿಂದೆ ದುರ್ಗೋತ್ಸವ ಕಾರ್ಯಕ್ರಮ ಹಮ್ಮಿಕೊಂಡು ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿತ್ತು. ಆದರೆ, ಇತ್ತೀಚೆಗೆ ದುರ್ಗೋತ್ಸವ ಆಚರಣೆ ಬಗ್ಗೆ ಜಿಲ್ಲಾಡಳಿತ ಹಾಗೂ ಚುನಾಯಿತ ಪ್ರತಿನಿಧಿಗಳು ನಿರಾಶಕ್ತಿ ತೋರಿರುವುದು ಸರಿಯಲ್ಲ, ಕೂಡಲೇ ದುರ್ಗೋತ್ಸವ ಕಾರ್ಯಕ್ರಮವನ್ನು ನಡೆಸಬೇಕೆಂದು ಒತ್ತಾಯಿಸಿ ಕರುನಾಡವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಶಾಸಕರಿಗೆ ಮನವಿ ಸಲ್ಲಿಸಿದರು. ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಶಾಸಕ ಟಿ.ರಘುಮೂರ್ತಿಯವರಿಗೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಮನವಿ ನೀಡಿ, ದುರ್ಗೋತ್ಸವ ಕಾರ್ಯಕ್ರಮವನ್ನು ನಡೆಸಿಕೊಡುವಂತೆ ಮನವಿ ಮಾಡಿದರು. ಈ ಹಿಂದೆ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಎಚ್.ಆಂಜನೇಯರವರ ಅಧ್ಯಕ್ಷತೆಯಲ್ಲಿ ಎರಡು ಬಾರಿ ಈ ಕಾರ್ಯಕ್ರಮ ನಡೆದಿತ್ತು. ನಂತರ ದುರ್ಗೋತ್ಸವ ಕಾರ್ಯಕ್ರಮ ನಡೆದಿಲ್ಲ. ಕಾರ್ಯಕ್ರಮದ ಬಗ್ಗೆ ಯಾರೂ ಸಹ ಗಮನಹರಿಸಿಲ್ಲ, ಆದ್ದರಿಂದ ಬರುವ ತಿಂಗಳು ದುರ್ಗೋತ್ಸವ ಕಾರ್ಯಕ್ರಮ ನಡೆಸಿದ್ದರೆ ಬೀದಿಗಿಳಿದು ಹೋರಾಟ ನಡೆಸುವ ಎಚ್ಚರಿಕೆಯನ್ನು ಅವರು ನೀಡಿದರು. ದುರ್ಗೋತ್ಸವ ಪ್ರತಿವರ್ಷ ಆಚರಣೆ ಮಾಡಲು ಸರ್ಕಾರದ ಮೇಲೆ ಶಾಸಕರು ಒತ್ತಡ ತರಬೇಕೆಂದು ಮನವಿ ಮಾಡಿದರು.

## ಯುವ ಜನಾಂಗ ದುಶ್ಚಟಗಳಿಗೆ ಬಲಿಯಾಗ ಬೇಡಿ: ಡಿವೈಎಸ್ಪಿ ದಿನಕರ್

» **ಚಿತ್ರದುರ್ಗ**

ಯುವ ಜನಾಂಗ ದುಶ್ಚಟಗಳಿಗೆ ಬಲಿಯಾಗಿ ಭವಿಷ್ಯ ಹಾಳು ಮಾಡಿಕೊಳ್ಳಬಾರದೆಂದು ಡಿ.ವೈ. ಎಸ್ಪಿ. ದಿನಕರ್ ವಿದ್ಯಾರ್ಥಿಗಳಿಗೆ ಕರೆ ನೀಡಿದರು.ಸರ್ಕಾರಿ ಕಲಾ ಕಾಲೇಜು ಮತ್ತು ವಿಜ್ಞಾನ ಕಾಲೇಜು ವಿದ್ಯಾರ್ಥಿನಿಲಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಮಾದಕ ವಸ್ತು ವಿರೋಧಿ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.




ಮಾದಕ ವಸ್ತುಗಳಿಗೆ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಹೆಚ್ಚು ಆಕರ್ಷಿತರಾಗುವುದು ಸಹಜ. ಇದರಿಂದ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಹಾಗಾಗಿ ಮಾದಕ ವ್ಯಸನದಿಂದ ದೂರವಿದ್ದು, ಆರೋಗ್ಯ ಪೂರ್ಣ ಸಮಾಜ ನಿರ್ಮಿಸಬೇಕಾಗಿರುವುದರಿಂದ ಜಿಲ್ಲೆಯನ್ನು ನಶೆಮುಕ್ತವನ್ನಾಗಿ ಸುವಂತೆ ಮನವಿ ಮಾಡಿದರು. ಎಲ್ಲಿಯಾದರೂ ಮಾದಕ ವಸ್ತುಗಳ ಸೇವನೆ ಕಂಡುಬಂದಲ್ಲಿ ಕಾನೂನು ಅಡಿ ಕಠಿಣ ಕ್ರಮ ಕೈಗೊಳ್ಳುವುದಾಗಿ ವಿದ್ಯಾರ್ಥಿಗಳಿಗೆ ಎಚ್ಚರಿಸಿದರು. ಬಡಾವಣೆ ಠಾಣೆ ಇನ್ಸ್‌ಪೆಕ್ಟರ್ ತಿಮ್ಮಣ್ಣ, ಸಬ್‌ಇನ್ಸ್‌ಪೆಕ್ಟರ್ ರಘು ಇವರುಗಳು ವೇದಿಕೆಯಲ್ಲಿದ್ದರು.



ಇತ್ತೀಚೆಗೆ ಬೆಂಗಳೂರಿನ ರವೀಂದ್ರಕಲಾಕ್ಷೇತ್ರದಲ್ಲಿ ಕನ್ನಡ ಜಾನಪದ ಪರಿಷತ್ ಆಯೋಜಿಸಿದ್ದ ರಾಜ್ಯಮಟ್ಟದ ಜಾನಪದ ಸಮ್ಮೇಳನದಲ್ಲಿ ತಾಲ್ಲೂಕಿನ ನನ್ನಿವಾಳ ಕ್ಷೇತ್ರದ ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಬಿ.ಪಿ.ಪ್ರಕಾಶ್‌ಮೂರ್ತಿಗೆ ನಾಡೋಜ ಎಸ್.ಕೆ.ಕರೀಂಖಾನ್ ಸೇವಾಪ್ರಶಸ್ತಿ ನೀಡಿ ಗೌರವಿಸಲಾಯಿತು.

**ಪ್ರಮುಖ ಸುದ್ದಿ**

### ಹೊಸದುರ್ಗದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ವಿದ್ಯುತ್ ಸುರಕ್ಷತಾ ಸಪ್ತಾಹ ಕಾರ್ಯಕ್ರಮ

# ವಿದ್ಯುತ್ ಸುರಕ್ಷತೆಯ ಬಗ್ಗೆ ಶಾಲೆಗಳಿಗೆ ಹೋಗಿ ಶಾಲಾ ಮಕ್ಕಳಲ್ಲಿ ಜಾಗೃತಿ ಮೂಡಿಸಿ–ಪರಿವೀಕ್ಷಕ ಶ್ರೀನಿವಾಸ್

» **ಹೊಸದುರ್ಗ**

ವಿದ್ಯುತ್ ವಿಷಯದಲ್ಲಿ ಅತ್ಮವಿಶ್ವಾಸ, ಆತುರ, ನಿರ್ಲಕ್ಷ್ಯ ಸಲ್ಲದು, ಎಲ್ಲೆ ಕೆಲಸ ಮಾಡಿದರೂ ಸಹಾ ಮೋದಲು ಅರ್ಥಿಂಗ್ ಮಾಡಿಕೊಂಡು ಕೆಲಸ ಪ್ರಾರಂಭಿಸಿ ವಿದ್ಯುತ್ ಸುರಕ್ಷತೆಯ ಬಗ್ಗೆ ಶಾಲೆಗಳಿಗೆ ಹೋಗಿ ಶಾಲಾ ಮಕ್ಕಳಲ್ಲಿ ಜಾಗೃತಿ ಮೂಡಿಸಿ, ಎಂದು ಕರ್ನಾಟಕ ಸಂಚಾರ ಚಿತ್ರದುರ್ಗ ವಿಭಾಗದ ವಿದ್ಯುತ್ ಪರಿವೀಕ್ಷಕ ಶ್ರೀನಿವಾಸ್ ತಿಳಿಸಿದರು.

ಪಟ್ಟಣದ ಶ್ರೀ ದುರ್ಗಾಂಬಿಕಾ ಸಮುದಾಯ ಭವನದಲ್ಲಿ ಬೆಸ್ಕಾಂ ಇಲಾಖೆಯ ಸಿಬ್ಬಂಧಿಯವರಿಗೆ ಶುಕ್ರವಾರ ಆಯೋಜಿಸಲಾಗಿದ್ದ ರಾಷ್ಟ್ರೀಯ ವಿದ್ಯುತ್ ಸುರಕ್ಷತಾ ಸಪ್ತಾಹ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಎಲ್.ಸಿ.ತಗೆದುಕೊಳ್ಳುವ ವಿಚಾರದಲ್ಲಿ




ಜನರಿಗೆ ಹಾಗೂ ರೈತರಿಗೆ ಹೆಚ್ಚಿನ ಅರಿವು ಮೂಡಿಸಬೇಕಾಗುತ್ತದೆ, ನೀವು ಎಲ್.ಸಿ.ಕೊಡುವಾದ ಸಾರ್ವಜನಿಕರಿಂದ ಮತ್ತು ರೈತರಿಂದ ಸರಿಯಾದ ಮಾಹಿತಿ ಪಡೆದುಕೊಂಡು ಎಲ್.ಸಿ.ಲೈನ್ ಕೊಡಲು ಮುಂದಾಗಿ ಅವರೊಂದು ಹೇಳುವುದು ನೀವೊಂದು ಮಾಡುವುದು ಬೇಡ ಎಂದು ಲೈನ್‌ಮ್ಯಾನ್‌ಗಳಿಗೆ ಎಚ್ಚರಿಕೆ ನೀಡಿದ ಅವರು ಒಂದು ಕಂಬದಲ್ಲಿ ಒಂದೇ ಸಪ್ಲೆ ಇರಬೇಕು ಎರಡು ಸಪ್ಲೆ ಇರಬಾರದು ಎಂದರು.

ಬೆಸ್ಕಾಂ ಇಲಾಖೆಯ ವತಿಯಿಂದ ತಾಲೂಕಿನ ಹಲವಾರು ಸ್ಥಳಗಳಲ್ಲಿ ಬೇಟಿ ನೀಡಿ ಅಲ್ಲಿರುವ ಶಾಲೆಗಳಿಗೆ ಅಲ್ಲಿನ ಮಕ್ಕಳಿಗೆ ವಿದ್ಯುತ್ ಸುರಕ್ಷತೆಯ ಬಗ್ಗೆ ಸರಿಯಾದ ಮಾಹಿತಿ ನೀಡಿ ಇದರಿಂದ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡುತ್ತದೆ ಎಂದ ಅವರು ವಿದ್ಯುತ್ ಬಗ್ಗೆ ಸರಿಯಾದ ಮಾಹಿತಿ ಮತ್ತು ಜಾಗೃತಿ ಇಲ್ಲದೆ ಇದ್ದ ಪರಿಣಾಮ ಚಿತ್ರದುರ್ಗ ಜಿಲ್ಲೆಯಲ್ಲೆ ಆರು ಮಂದಿಮತ್ತುನಾಲ್ಕುವಿದ್ಯಾರ್ಥಿಗಳುವಿವಿಧ ಕಾರಣಗಳಿಂದ ತಮ್ಮ ಪ್ರಾಣವನ್ನೆ ತೆತ್ತಿದ್ದಾರೆ ಈ ಒಂದು ಹಿನ್ನೆಲೆಯಲ್ಲಿ ಪ್ರತಿಯೊಂದು ವಿಷಯದಲ್ಲೂ ಸಹಾ ಜಾಗೃತಿ ಅತ್ಯಂತ ಮುಖ್ಯವಾದದ್ದು ಎಂದರು.ಸಾರ್ವಜನಿಕರು ಕಂಬಗಳಿಗೆ ಕೋಕ್ಕೆ ಹಾಕಿಕೊಂಡು ವಿದ್ಯುತ್ ಪಡೆಯುತ್ತಿರುವುದನ್ನ ತಪ್ಪಿಸಿ ಅವರಲ್ಲಿ ಜಾಗೃತಿ ಮೂಡಿಸಿ, ಅಡಿಕೆ ಸಸಿ ಮೇಲೆ ವಿದ್ಯುತ್ ಲೈನ್ ಹೋದಾಗ ಜಾಗೃತರಾಗಿರಬೇಕು ಎಂದು ರೈತರಿಗೆ ಕಿವಿ ಮಾತು ಹೇಳಿದ ಅವರು ವಿದ್ಯುತ್ ಬಗ್ಗೆ ಜಾಗೃತಿ ಇರಲಿ ಸದಾ ಸುರಕ್ಷತಾ ಕ್ರಮಗಳನ್ನು ಪಾಲಿಸಿ ಎಂದು ಎಚ್ಚರಿಕೆ ನೀಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಸಂಚಾರ ಚಿತ್ರದುರ್ಗ ವಿಭಾಗದ ಆಶಾ, ಜಿಲ್ಲಾ ಬೆಸ್ಕಾಂ ಇಲಾಖೆಯ ಎಇಇ ಜಿ.ತಿಮ್ಮರಾಮಪ್ಪ, ಮೇಘರಾಜ್, ಹೊಸದುರ್ಗ ಎಇಇ ಕಿರಣ್‌ರೆಡ್ಡಿ, ಶ್ರೀರಾಂಪುರ ಎಇಇ ಅನಿಲ್‌ಕುಮಾರ್, ಪದಾಧಿಕಾರಿಗಳಾದ ಹೆಚ್.ಕೆ.ಮಂಜುನಾಥ್, ರಮೇಶ್ ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**


## ಮುಖ್ಯ ಪಶುವೈದ್ಯಾಧಿಕಾರಿ ಡಾ.ಕಿರಣ್‌ಗೆ ಬೀಳ್ಕೊಡುಗೆ



» **ಹೊಸದುರ್ಗ**

ಪಟ್ಟಣದ ಪಶು ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸಿ ಇದೀಗ ತಾಲೂಕಿನ ಮಲ್ಲಪ್ಪನಹಳ್ಳಿಯ ಪಶು ಚಿಕಿತ್ಸಾಲಯಕ್ಕೆ ವರ್ಗಾವಣೆ ಗೊಂಡ ಮುಖ್ಯ ಪಶು ವೈದ್ಯಾಧಿಕಾರಿ ಡಾ, ಕಿರಣ್‌ಗೆ ಬೀಳ್ಕೊಡುಗೆಯನ್ನ ನೀಡಲಾಯಿತು. ಕಾರ್ಯಕ್ರಮದಲ್ಲಿ ಹೊಸದುರ್ಗ ಪಶು ಆಸ್ಪತ್ರೆಯ ಸಹಾಯಕ ನಿರ್ದೇಶಕ ಡಾ. ಶಿವಪ್ಪ, ಸರ್ಕಾರಿ ನೌಕರ ಸಂಘದ ನಿಕಟಪೂರ್ವ ಅಧ್ಯಕ್ಷ ಗಂಗಾಧರಪ್ಪ, ಸರ್ಕಾರಿ ನೌಕರ ಸಂಘದ ನಿರ್ದೇಶಕರಾದ ಪುಟ್ಟರಾಜ, ಯಲ್ಲಪ್ಪ, ಪಶುವೈದ್ಯಧಿಕಾರಿಗಳಾದ ದೇವರಾಜ್, ರವಿ, ಗೋವಿಂದಸ್ವಾಮಿ, ಯರಿಸ್ವಾಮಿ,ವೆಂಕಟೇಶನಾಯಕ, ಲಕ್ಷ್ಮಣ್ ನಾಯಕ್ ಸೇರಿದಂತೆ ಮತ್ತಿತರರು ಹಾಜರಿದ್ದರು.

## ರೈತರ ಜಮೀನನ್ನು ಖಾಸಗಿ ಕಂಪನಿಗಳಿಗೆ ಕೊಡಲು ರೈತರ ವಿರೋಧ



» **ಹೊಸದುರ್ಗ**

ದೇವನಹಳ್ಳಿಯಲ್ಲಿ ಕಳೆದ ಸುಮಾರು ದಿನಗಳಿಂದ ರೈತರ ಪ್ರತಿಭಟನೆ ನಡೆಯುತ್ತಿದ್ದು, ಕೆ.ಐ.ಡಿ.ಬಿ.ಎ ರೈತರ ಜಮೀನನ್ನು ಖಾಸಗಿ ಕಂಪನಿಗಳಿಗೆ ಕೊಡಲು ರಾಜ್ಯ ಸರ್ಕಾರ ತೀರ್ಮಾನ ತೆಗೆದುಕೊಂಡಿದೆ. ರೈತರು ಯಾವುದೇ ಕಾರಣಕ್ಕೂ ನಮ್ಮ ಭೂಮಿಯನ್ನು ಕೊಡುವುದಿಲ್ಲ. ಇದಕ್ಕೆ ನಮ್ಮಿಂದ ಸಂಪೂರ್ಣ ವಿರೋಧವಿದೆ ಎಂದು ತಾಲೂಕು ರೈತ ಸಂಘದ ವತಿಯಿಂದ ಪಟ್ಟಣದ ತಾಲೂಕು ಕಚೇರಿಯಲ್ಲಿ ತಹಸೀಲ್ದಾರ್ ಮೂಲಕ ಸರ್ಕಾರಕ್ಕೆ ಒತ್ತಾಯಿಸಲಾಯಿತು. ಇದೇ ಸಂದರ್ಭದಲ್ಲಿ ರೈತ ಸಂಘಟನೆಯ ಹಿರಿಯ ಮುಖಂಡ ಮಹೇಶ್ವರಪ್ಪ ಮಾತನಾಡಿ, ದೇವನಹಳ್ಳಿ ಸಮೀಪದ ರೈತರು ಖಾಸಗಿ ಕಂಪನಿಗಳಿಗೆ ನಮ್ಮ ಜಮೀನುಗಳನ್ನು ಕೊಡುವುದಿಲ್ಲವೆಂದು ಪ್ರತಿಭಟನೆ ನಡೆಸುವಾಗ, ರೈತರನ್ನು ಬಂಧಿಸಲಾಗಿದೆ. ಕೂಡಲೇ ರೈತರನ್ನು ಬಿಡುಗಡೆ ಮಾಡಬೇಕು. ಇಲ್ಲವಾದರೆ ರೈತ ಸಂಘಟನೆಗಳಿಂದ ರಾಜ್ಯಾದ್ಯಂತ ಪ್ರತಿಭಟನೆಗೆ ಕರೆ ನೀಡಲಾಗುವುದು ಎಂದು ಹೇಳಿದರು. ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ, ಹೊಸದುರ್ಗ ತಾಲೂಕು ಘಟಕ ಇವರುಗಳ ವತಿಯಿಂದ ಪಟ್ಟಣದ ತಾಲೂಕು ಕಚೇರಿ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿ, ತಹಶೀಲ್ದಾರ್ ಮೂಲಕ ಮನವಿ ಸಲ್ಲಿಸಲಾಯಿತು.

## ಹುಲಿಗಳ ಸಾವಿನ ಪ್ರಕರಣ ಗಂಭೀರವಾಗಿ ಪರಿಗಣಿಸಲು ಬಿಜೆಪಿ ಆಗ್ರಹ

» **ಚಿತ್ರದುರ್ಗ**

ಮಲೆ ಮಾದೇಶ್ವರ ಅರಣ್ಯ ಪ್ರದೇಶದಲ್ಲಿ ಐದು ಹುಲಿಗಳ ಮಾರಣ ಹೋಮ ನಡೆದಿದೆ ಇದಕ್ಕೆ ಯಾರು? ಹೊಣೆ, ಸರ್ಕಾರ ಶೀಘ್ರವೇ ಉತ್ತರ ಕೊಡಬೇಕಿದೆ ಎಂದು ಬಿಜೆಪಿ ಮುಖಂಡರಾದ ಮಂಜುಳಾ ಸ್ವಾಮಿಯವರು ಆಗ್ರಹಿಸಿದ್ದಾರೆ. ಈ ಬಗ್ಗೆ



ಹೇಳಿಕೆಯನ್ನು ನೀಡಿರುವ ಭಾರತ ದೇಶದಲ್ಲಿ ಹುಲಿಗಳ ಸಂಖ್ಯೆ ಕಡಿಮೆಯಾಗುತ್ತಲೇ ಇದೆ ಇದರ ನಡುವೆ ಐದು ಹುಲಿಗಳು ಪ್ರಾಣ ಬಿಟ್ಟಿವೆ. ಇದಕ್ಕೆ ಕಾಂಗ್ರೆಸ್ ಸರ್ಕಾರದ ವೈಫಲ್ಯಾವೆ ಹೊರತು ಬೇರೆ ಏನು ? ಅಲ್ಲ, ಮಲೆ ಮಾದೇಶ್ವರ ಅರಣ್ಯ ಪ್ರದೇಶದ ಅಧಿಕಾರಿಗಳ ನಿರ್ಲಕ್ಷ್ಯತನದಿಂದ ಕಾಡು ಕಳ್ಳರು ಹುಲಿಗಳನ್ನ ಕೊಲೆ ಮಾಡಿದ್ದಾರೆ. ಮಲೆ ಮಾದೇಶ್ವರ ಅರಣಪ್ರದೇಶದಲ್ಲಿನ ಅರಣ್ಯ ಅಧಿಕಾರಿಗಳು ಕೆಲಸ ಮಾಡದೆ ಅಲ್ಲಿನ ಮರಗಳನ್ನು ಸಹ ಮಾರಿಕೊಳ್ಳುತ್ತಿದ್ದಾರೆ. ಇದರ ನಡುವೆ 5 ಹುಲಿಗಳನ್ನು ಕೊಲ್ಲುವುದಕ್ಕೆ ಇವರು ನೇರ ಕಾರಣರಾಗಿದ್ದಾರೆ. ಕಾಂಗ್ರೆಸ್ ಸರ್ಕಾರದ ಅರಣ್ಯ ಸಚಿವರಾದ ಈಶ್ವರ ಖಂಡ್ರೆ ಇದರ ಬಗ್ಗೆ ಸೂಕ್ತ ತನಿಖೆಯನ್ನು ನಡೆಸಿ ತಪ್ಪಿತಸ್ಥ ಅಧಿಕಾರಿಗಳನ್ನು ಕೆಲಸದಿಂದ ವಜಾಗೊಳಿಸಬೇಕು, ಈ ವಿಚಾರ ಗಂಭೀರವಾಗಿ ಪರಿಗಣಿಸಿ, ಅಳಿದು ಹೋಗುತ್ತಿರುವ ಹುಲಿ ಸಂರಕ್ಷಣೆ ಮಾಡಬೇಕಾಗಿದೆ.

## ಸುರಕ್ಷತಾ ಸಪ್ತಾಹ

» **ದಾವಣಗೆರೆ**

ಬೆವಿಕಂ ವಿಭಾಗದ ವತಿಯಿಂದ ಜೂನ್ 26 ರಿಂದ ಜುಲೈ 2 ರವರೆಗೆ ಸಾರ್ವಜನಿಕರ ವಿದ್ಯುತ್ ಸುರಕ್ಷತೆಯ ತಿಳುವಳಿಯ ಸಲುವಾಗಿ ವಿದ್ಯುತ್ ಬಗ್ಗೆ ಜಾಗೃತಿ ಇರಲಿ, ಸುರಕ್ಷತಾ ಕ್ರಮಗಳನ್ನು ಸದಾ ಅನುಸರಿಸಿ ನಿಮ್ಮ ಅಮೂಲ್ಯ ಜೀವದ ರಕ್ಷಣೆ ನಮ್ಮ ಆದ್ಯತೆ ಎಂಬ ಘೋಷವಾಕ್ಯದೊಂದಿಗೆ ರಾಷ್ಟ್ರೀಯ ವಿದ್ಯುತ್ ಸುರಕ್ಷತಾ ಸಪ್ತಾಹವನ್ನು ಆಚರಿಸಲಾಗುತ್ತದೆ ಎಂದು ಬೆಸ್ಕಾಂ ತಿಳಿಸಿದೆ.

# ವಿದ್ಯಾರ್ಥಿಗಳು ಕೆಂಪೇಗೌಡರ ಹಾದಿಯನ್ನು ಅರಿತುಕೊಳ್ಳಬೇಕು: ಜಿಲ್ಲಾಧಿಕಾರಿ ಗಂಗಾಧರಸ್ವಾಮಿ

» **ದಾವಣಗೆರೆ**

ಕೆಂಪೇಗೌಡರ ರೀತಿ ವೈಜ್ಞಾನಿಕ ತಳಹದಿಯ ಮೇಲೆ ವಿದ್ಯಾರ್ಥಿಗಳು ಚಿಂತನೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರಾತಾ ಇಲಾಖೆ ಹಾಗೂ ಜಿಲ್ಲಾ ಒಕ್ಕಲಿಗರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ನಗರದ ಕುವೆಂಪು ಕನ್ನಡ ಭವನದಲ್ಲಿ ಆಯೋಜಿಸಿದ್ದ 516 ನೇ ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕದ ಶೇ.50 ರಷ್ಟು ಆರ್ಥಿಕ ವ್ಯವಸ್ಥೆ ಬೆಂಗಳೂರಿನಲ್ಲಿದೆ. ಕೆಂಪೇಗೌಡರು ಮೊದಲು ಯಲಹಂಕಕ್ಕೆ ಬಂದು ನಂತರ ಮಾಗಡಿಗೆ ಬಂದರು. ಪೇಟೆಗಳನ್ನು ನಿರ್ಮಿಸಿ ವಾಣಿಜ್ಯ ವಹಿವಾಟುಗಳಿಗೆ ಹಾಗೂ ಕುಶಲಕರ್ಮಿಗಳ ವ್ಯಾಪಾರಕ್ಕೆ ದಾರಿ ಮಾಡಿಕೊಟ್ಟರು. ಹಾಗಾಗಿ ವಿದ್ಯಾರ್ಥಿಗಳು ಕೆಂಪೇಗೌಡರ ಹಾದಿಯನ್ನು ಅರಿತುಕೊಳ್ಳುವುದು ಅವಶ್ಯಕವಾಗಿದೆ ಎಂದರು. ನಗರವನ್ನು ಹೇಗೆ ಬೆಳವಣಿಗೆ ಮಾಡಬೇಕು. ನಗರಕ್ಕೆ ಯೋಜನೆ ಯಾವರೀತಿ ರೂಪಿಸಬೇಕು ಎಂದು ಈ ಕ್ಷೇತ್ರದ ಕುರಿತು ಮಕ್ಕಳು ವಿದ್ಯಾಭ್ಯಾಸ ಮಾಡಿದರೆ ಉದ್ಯೋಗವು ನಿಮ್ಮನ್ನು ಕೈ ಬೀಸಿ ಕರೆಯುತ್ತದೆ. ಬೆಂಗಳೂರಿನಲ್ಲಿ ಕೆಂಪೆಗೌಡರು ಸುಮಾರು 26 ಪೇಟೆಗಳನ್ನು ನಿರ್ಮಾಣ ಮಾಡಿದ್ದಾರೆ. ಅವರು ನಿರ್ಮಿಸುವ ಪೇಟೆಗಳು ಯಾವುದೇ ಟ್ರಾಫಿಕ್ ಆಗದಂತೆ ಜಾಗ್ರತಿವಹಿಸಿದ್ದಾರೆ. ಸಿಂಧೂ ನಾಗರಿಕತೆ ಪ್ಲಾನ್ ಪ್ರಕಾರ ಬೆಂಗಳೂರನ್ನು ನಿರ್ಮಾಣ ಮಾಡಿದರು. ಸಾರ್ವಜನಿಕರು ಬಾವಿ ಇಲ್ಲವೆ ಬೋರ್ ತೆಗೆದರೆ 10–15 ಅಡಿ ಆಳದಲ್ಲೇ ನೀರು ಸಿಗುವಂತೆ ಕ್ರಮವಹಿಸಿದ್ದಾರೆ. ಅನೇಕ ದೇವಸ್ಥಾವನ್ನು ನಿರ್ಮಾಣ ಮಾಡಿದ್ದಾರೆ



ಹಿರಿಯ ಪತ್ರಕರ್ತರಾದ ಬಿ.ಎನ್ ಮಲ್ಲೇಶ್ ಮಾತನಾಡಿ, ಕೆಂಪೇಗೌಡರು ಉತ್ತಮ ಬೆಂಗಳೂರಿನ ನಾಲ್ಕು ದಿಕ್ಕಿನಲ್ಲಿ ಕೋಟೆ, ಕೆರೆ, ಕಟ್ಟೆ ಕಟ್ಟಿಸಿದರು, ಮಾರುಕಟ್ಟೆ ಕಟ್ಟಿದ್ದರು. ಆ ಮೂಲಕ ಸುಂದರ, ಸೌಹಾರ್ದ ರಾಜ್ಯವನ್ನು ನಿರ್ಮಿಸಿದರು. ವರ್ತಮಾನದಲ್ಲಿ ಬೆಂಗಳೂರಿಗೆ ಗ್ಲೋಬಲ್ ಸಿಟಿ ಆಗಿ ವಿಶ್ವದಲ್ಲಿ ಮನ್ನಣೆ ಸಿಗುತ್ತಿದೆ ಎಂದರೆ ಅದಕ್ಕೆ ಕೆಂಪೇಗೌಡರೇ ಕಾರಣಕರ್ತರು ಎಂದು ತಿಳಿಸಿದರು.

ನಗರ ನಿರ್ಮಾಣಕ್ಕೆ ಸೂಕ್ತ ಜಾಗವನ್ನರಸುತ್ತಾಅಮಾತ್ಯವೀರಣ್ಣಹಾಗೂ ಕೆಲ ಸೈನಿಕರೊಂದಿಗೆ ಯಲಹಂಕದಿಂದ ದಕ್ಷಿಣಕ್ಕೆ ಹತ್ತು ಮೈಲು ದೂರ ದಾಟಿ ಎತ್ತರದ ಪ್ರದೇಶವೊಂದಕ್ಕೆ ಬರುವ ಕೆಂಪೇಗೌಡರಿಗೆ ಸಣ್ಣ–ಪುಟ್ಟ ತೊರೆಗಳಿಂದ ಕೂಡಿದ ಹಸಿರಿನಿಂದ ನಳನಳಿಸುತ್ತಿದ್ದ ಕಾಡು ಎದುರಾಗುತ್ತದೆ. ಕಾಡಿನ ನಡುವೆ ಸಾಗುತ್ತಿದ್ದಂತೆ ಒಂದು ವಿಸ್ಮಯಕಾರಿ ಘಟನೆ ಕೆಂಪೇಗೌಡರ ಎದುರಿನಲ್ಲೇ ನಡೆಯುತ್ತದೆ. ಪುಟ್ಟ ಮೊಲವೊಂದು ತನ್ನನ್ನು ತಿನ್ನಲೆಂದು ಬಂದ ಬೇಟೆ ನಾಯಿಯೊಂದನ್ನು ಓಡಿಸಿಕೊಂಡು ಹೋಗುತ್ತಿರುವುದು ಕೆಂಪೇಗೌಡರಿಗೆ ಕಂಡುಬರುತ್ತದೆ. ಇಲ್ಲಿರುವ ಸಾಮಾನ್ಯ ಮೊಲವೊಂದಕ್ಕೆ ಇಷ್ಟು ಧೈರ್ಯವಿರಬೇಕಾದರೆ ಇದು ಖಂಡಿತ ವೀರಭೂಮಿಯೇ ನಿಜ ಎನಿಸುತ್ತದೆ. ಹೀಗಾಗಿ ನಗರ ನಿರ್ಮಾಣಕ್ಕೆ ಇದೇ ಸೂಕ್ತವಾದ ಪ್ರದೇಶವೆಂದು ಕೆಂಪೇಗೌಡರು ಭಾವಿಸುತ್ತಾರೆ. ಅಲ್ಲದೆ ನಾನಾಕಡೆಗಳಿಂದ ತೊರೆಗಳಾಗಿ ಹರಿದು ಅರ್ಕಾವತಿ ನದಿಗೆ ಸೇರುತ್ತಿದ್ದ ಪ್ರದೇಶವೂ ಇದಾದ್ದರಿಂದ ನೀರಾವರಿಗೂ ಯೋಗ್ಯವಾಗಿದೆಯೆಂದು ಗೌಡರು ತೀರ್ಮಾನಿಸುತ್ತಾರೆ. ತಮ್ಮ ಪರಿವಾರದ ಹಿರಿಯರೊಂದಿಗೆ ಸಮಾಲೋಚಿಸಿ ಒಪ್ಪಿಗೆ ಪಡೆದು ಕೆಂಪೇಗೌಡರು ರಾಜ್ಯದ ನಾಗರೀಕರಲ್ಲಿ ಸಾಮಾಜಿಕ ಸಾಮರಸ್ಯದ ಆಲೋಚನೆಯನ್ನು ಮೂಡಿಸಿದ್ದರು. ಈ ದೇಶವನ್ನು ಅನೇಕರು ಆಳ್ವಿಕೆ ಮಾಡಿದ್ದಾರೆ. ಆದರೆ ನಮ್ಮ ನೆನಪಿನಲ್ಲಿ ಸದಾ ಉಳಿಯುವುದು ಕೆಂಪೇಗೌಡ ಆಳ್ವಿಕೆಯ ಕಾಲ. ಹಾಗಾಗಿ ಬೆಂಗಳೂರು ಅಂದರೆ ನಮ್ಮ ಕಣ್ಣ ಮುಂದೆ ಬರುವ ಚಿತ್ರಣ ಕೆಂಪೇಗೌಡರದು. ಇವರು ವಿಜಯನಗರ ಸಾಮ್ರಾಜ್ಯದ ಕಾಲಘಟ್ಟದಲ್ಲೆ ರಾಜ್ಯದ ಅಭಿವೃದ್ಧಿಗಾಗಿ ಅನೇಕ ಕಾರ್ಯಗಳನ್ನು ಕೈಗೊಂಡಿದ್ದು, ಆ ದೂರದೃಷ್ಟಿಯ ಆಲೋಚನೆಯಿಂದ ಭವಿಷ್ಯ ಬೆಂಗಳೂರನ್ನು ಕಟ್ಟಿದ್ದಾರೆ. ಕೆಂಪೇಗೌಡರು ನಾಗರೀಕ ಸಮಾಜಕ್ಕೆ ಏನು ಬೇಕು, ಏನು ಬೇಡ ಎಂಬುದನ್ನು ಅರಿತ್ತಿದ್ದರು. ಆ ದೃಷ್ಟಿಯಿಂದ ಬೆಂಗಳೂರಿನ ಜನರಿಗೆ ಕುಡಿಯುವ ನೀರಿಗಾಗಿ ಕೆರೆ ಕಟ್ಟೆಗಳನ್ನು ಕಟ್ಟಿಸಿದ್ದರು. ನಾಗರೀಕರಿಗೆ ಅನುಕೂಲ ಮಾಡಿಕೊಟ್ಟರು. ಅಭಿವೃದ್ಧಿ ಜೊತೆಗೆ ಕೆಂಪೇಗೌಡರು ಸಾಂಸ್ಕೃತಿಕ, ಕಲೆ, ಸಾಹಿತ್ಯಕ್ಕೂ ಒತ್ತು ನೀಡಿದ್ದು ಯಕ್ಷಗಾನ ಕೃತಿಯನ್ನು ರಚಿಸಿದ್ದಾರೆ. ಅನೇಕ ಮೈಲಿಗಲ್ಲು ಸ್ಥಾಪಿಸಿದ್ದಾರೆ. ಕೆಂಪೇಗೌಡರು ಬೆಂಗಳೂರನ್ನು ಕಟ್ಟುವಾಗ ಎಲ್ಲ ಜಾತಿ, ಜನಾಂಗದವರ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ನಗರ ನಿರ್ಮಿಸಿದರು. ಇತಿಹಾಸಕ್ಕೆ ಬೇಕಾದ ಎಲ್ಲಾ ಕಾರ್ಯವನ್ನು ಮಾಡಿದ್ದಾರೆ. ಅದರ ಫಲವಾಗಿ ಇಂದು ಬೆಂಗಳೂರನ್ನು ವಿಶ್ವವೇ ತಿರುಗಿ ನೋಡುತ್ತಿದೆ ಎಂದು ಹೇಳಿದರು.

ನಾಡಪ್ರಭು ಕೆಂಪೇಗೌಡರ ಕುರಿತು ಪ್ರಬಂಧ ಸ್ಪರ್ದೆ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ದೂಡಾ ಅಧ್ಯಕ್ಷರಾದ ದಿನೇಶ್. ಕೆ.ಶೆಟ್ಟಿ, ಡಿಡಿಪಿಐ ಕೊಟ್ರೇಶ್, ಜಿಲ್ಲಾ ಯೋಜನಾ ನಿರ್ದೇಶಕಿ ರೇಷ್ಮಾ ಕೌಸರ್, ಬಿಇಓ ಪುಷ್ಪಾಲತಾ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ವಾಮದೇವಪ್ಪ, ಒಕ್ಕಲಿಗರ ಸಂಘದ ಅಧ್ಯಕ್ಷ ಯೋಗೇಶ್, ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಇಂದು ಸರ್ಕಾರದ ಸಾಧನೆ ಬಿಂಬಿಸುವ ವಸ್ತು ಪ್ರದರ್ಶನ ಉದ್ಘಾಟನೆ ಕಾರ್ಯಕ್ರಮ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಚಿತ್ರದುರ್ಗ ವಿಭಾಗದ ವತಿಯಿಂದ ಇದೇ ಜೂನ್ 28ರಂದು ಬೆಳಿಗ್ಗೆ 10.30ಕ್ಕೆ ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ "ಕರ್ನಾಟಕ ರಾಜ್ಯ ಸರ್ಕಾರದ ಸಾಧನೆ ಬಿಂಬಿಸುವ ವಸ್ತು ಪ್ರದರ್ಶನ ಉದ್ಘಾಟನಾ ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲೆಯ ಶಾಸಕರು, ಚುನಾಯಿತ ಜನಪ್ರತಿನಿಧಿಗಳು, ಗಣ್ಯರು ಉಪಸ್ಥಿತರಿರುವರು. ಜೂ.28 ರಿಂದ 30 ರವರೆಗೆ ವೀಕ್ಷಿಸಲು ಅವಕಾಶ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ರಾಜ್ಯ ಸರ್ಕಾರದ ಎರಡು ವರ್ಷಗಳ ಸಾಧನೆ ಹಾಗೂ ಯೋಜನೆಗಳನ್ನು ಬಿಂಬಿಸುವ ವಸ್ತು ಪ್ರದರ್ಶನವನ್ನು ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಇದೇ ಜೂ.28 ರಿಂದ 30 ರವರೆಗೆ ಏರ್ಪಡಿಸಲಾಗಿದೆ. ಈ ವಸ್ತುಪ್ರದರ್ಶನವು ಸಾರ್ವಜನಿಕರ ವೀಕ್ಷಣೆಗೆ ಅವಕಾಶ ಲಭ್ಯವಿರುತ್ತದೆ ಎಂದು ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ತಿಳಿಸಿದ್ದಾರೆ.

### ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

» **ಚಿತ್ರದುರ್ಗ**

ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಅವರು ಇದೇ ಜೂನ್ 28 ರಿಂದ 30 ರವರೆಗೆ ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಸಚಿವರು ಜೂ.28ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗಕ್ಕೆ ಆಗಮಿಸಿ, ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಏರ್ಪಡಿಸಲಾಗಿರುವ ಸರ್ಕಾರದ 2 ವರ್ಷದ ಸಾಧನೆ ಹಾಗೂ ಸರ್ಕಾರದ ಯೋಜನೆಗಳನ್ನು ಬಿಂಬಿಸುವ ವಸ್ತು ಪ್ರದರ್ಶನ ಉದ್ಘಾಟನೆ ನೆರವೇರಿಸುವರು. ಬೆಳಿಗ್ಗೆ 11.15ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದ ಪತ್ರಿಕಾಭವನದಲ್ಲಿ ಚಿತ್ರದುರ್ಗ ಪತ್ರಿಕಾ ಭವನದ ನವೀಕೃತ ಹೈಟೆಕ್ ಸಭಾಭವನ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ 12ಕ್ಕೆ ಹಿರಿಯೂರು ನಗರದ ಗಾಂಧಿ ಸರ್ಕಲ್‌ನಿಂದ ರಂಜಿತಾ ಹೋಟೆಲ್‌ವರೆಗೆ ಮುಖ್ಯರಸ್ತೆ ಮರು ಡಾಂಬರಿಕರಣಕ್ಕೆ ಚಾಲನೆ, ಮಧ್ಯಾಹ್ನ 12.30ಕ್ಕೆ ಹಿರಿಯೂರು ತುಳಸಿ ಕಲ್ಯಾಣ ಮಂಟಪದಲ್ಲಿ ಡಾ.ಬಾಬು ಜಗಜೀವನರಾಂ ಯುವಕ ಸಂಘ ಉದ್ಘಾಟನೆ ಹಾಗೂ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಮಾದಿಗ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟನೆ, ಮಧ್ಯಾಹ್ನ 2.30ಕ್ಕೆ ಹಿರಿಯೂರು ನಗರಸಭೆ ವತಿಯಿಂದ ವಿದ್ಯಾರ್ಥಿಗಳಿಗೆ ಹಾಗೂ ಫಲಾನುಭವಿಗಳಿಗೆ ವಿಶೇಷ ಆರ್ಥಿಕ ನೆರವು, ಗಣಕಯಂತ್ರ ವಿತರಣೆ ಹಾಗೂ ಮಿನಿ ಟಿಪ್ಪರ್ ವಾಹನದ ಚಾಲನೆ, ಸಂಜೆ 5.30ಕ್ಕೆ ಹಿರಿಯೂರು ನೆಹರು ಮೈದಾನದಲ್ಲಿ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ದ್ವಿತೀಯ ಪಿಯುಸಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ಮಕ್ಕಳ ಜಾನಪದ ಸಾಂಸ್ಕೃತಿಕ ಹಬ್ಬದಲ್ಲಿ ಭಾಗವಹಿಸಿ, ಚಳ್ಳಕೆರೆಯಲ್ಲಿ ವಾಸ್ತವ್ಯ ಮಾಡುವರು.

ಜೂನ್ 29ರಂದು ಬೆಳಿಗ್ಗೆ 10.30ಕ್ಕೆ ಯರಬಳ್ಳಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಅರಿವು ಸೇವಾ ಟ್ರಸ್ಟ್ ಇವರ ನೇತೃತ್ವದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸಹಕಾರದಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರ, ಬೆಳಿಗ್ಗೆ 11ಕ್ಕೆ ಹಿರಿಯೂರು ಮೋಕ್ಷಗುಂಡಂ ವಿಶ್ವೇಶ್ವರಯ್ಯ ವಿದ್ಯಾಲಯದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಹಾಗೂ ವೀರಶೈವ ಲಿಂಗಾಯತ ಸರ್ಕಾರಿ ನೌಕರರ ಸಂಘ ಸಹಯೋಗದಲ್ಲಿ 2024–25ನೇ ಸಾಲಿನಲ್ಲಿ ಉತ್ತೀರ್ಣರಾದ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಸಮಾರಂಭ, ಮಧ್ಯಾಹ್ನ 12ಕ್ಕೆ ಹಿರಿಯೂರು ರೋಟರಿ ಸಭಾ ಭವನದಲ್ಲಿ ಹಿರಿಯೂರು ತಾಲ್ಲೂಕು ವಾಲ್ಮೀಕಿ ನಾಯಕ ಸಮಾಜದ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಸಮಾರಂಭ, ಮಧ್ಯಾಹ್ನ 1ಕ್ಕೆ ಹಿರಿಯೂರು ವಾಸವಿ ಕಲ್ಯಾಣ ಮಂಟಪದಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಗನ್ನಾಯಕನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸರ್ಕಾರಿ ಕಿರಿಯ, ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ, ಮಧ್ಯಾಹ್ನ 2 ರಿಂದ ಸಂಜೆ 6 ರವರೆಗೆ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಚಳ್ಳಕೆರೆಯಲ್ಲಿ ವಾಸ್ತವ್ಯ ಮಾಡುವರು. ಜೂನ್ 30ರಂದು ಬೆಳಿಗ್ಗೆ 11.30ಕ್ಕೆ ಚಿತ್ರದುರ್ಗ ಡಿಸಿಸಿ ಬ್ಯಾಂಕ್‌ನಲ್ಲಿ ಬೋರ್ಡ್ ಮೀಟಿಂಗ್, ಮಧ್ಯಾಹ್ನ 3ಕ್ಕೆ ಬಂಡ್ಲೋರಹಟ್ಟಿ ಗ್ರಾಮದಲ್ಲಿ ಐಮಂಗಲದಿಂದ ಬಂಡ್ಲೋರಹಟ್ಟಿಗೆ ಹೋಗುವ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಂಕುಸ್ಥಾಪನೆ, ಮಧ್ಯಾಹ್ನ 4ಕ್ಕೆ ಮಸ್ಕಲ್ ಗ್ರಾಮದಲ್ಲಿ ಮಸ್ಕಲ್ ಗ್ರಾಮದಿಂದ ಹೊಸಯಳನಾಡು ಗ್ರಾಮಕ್ಕೆ ಹೋಗುವ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಂಕುಸ್ಥಾಪನೆ, ಸಂಜೆ 5ಕ್ಕೆ ಧರ್ಮಪುರ ಗ್ರಾಮದಲ್ಲಿ ಧರ್ಮಪುರದಿಂದ ಬೆನಕನಹಳ್ಳಿಗೆ ಹೋಗುವ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ, ನಂತರ ಬೆಂಗಳೂರಿಗೆ ಪ್ರಯಾಣ ಬೆಳೆಸುವರು.

# ಕೆಂಪೇಗೌಡರು ದಕ್ಷ, ದೂರದೃಷ್ಟಿಯಿದ್ದಂತಹ ಆಡಳಿತಗಾರ: ಮುಖ್ಯಮಂತ್ರಿ ಸಿದ್ದರಾಮಯ್ಯ

» **ಬೆಂಗಳೂರು**

ಕೆಂಪೇಗೌಡರು ದಕ್ಷ ಹಾಗೂ ದೂರದೃಷ್ಟಿಯಿದ್ದಂತಹ ಆಡಳಿತಗಾರ. ಆಧುನಿಕ ಬೆಂಗಳೂರಿನ ನಿರ್ಮಾತೃ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಶುಕ್ರವಾರ ಬೆಂಗಳೂರಿನ ವಿಧಾನಸೌಧದ ಪೂರ್ವ ದಿಕ್ಕಿನಲ್ಲಿ ರುವ ನಾಡಪ್ರಭು ಕೆಂಪೇಗೌಡ ರವರ 516 ನೇ ಜಯಂತಿ ಯ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ಕಾರ್ಯಕ್ರಮ ವನ್ನು ಉದ್ದೇಶಿಸಿ ಮಾಧ್ಯಮ ದವರೊಂದಿಗೆ ಮಾತನಾಡಿದರು.ಕೆಂಪೇಗೌಡರ 516ನೇ ಜಯಂತಿಯನ್ನು ಸರ್ಕಾರ, ಕಂಪೇಗೌಡ ಅಭಿವೃದ್ಧಿ ಪ್ರಾಧಿಕಾರ ಹಾಗೂ ಬಿಬಿಎಂಪಿ ಸಹಯೋಗದಲ್ಲಿ ಆಚರಿಸಲಾಗುತ್ತಿದೆ. 2013–18 ರ ಅವಧಿಯಲ್ಲಿ ನಮ್ಮ ಸರ್ಕಾರ ನಿರ್ಮಲಾನಂದ ಸ್ವಾಮೀಜಿ ಅವರೊಂದಿಗೆ ಚರ್ಚೆ ಮಾಡಿ ಜನ್ಮದಿನಾಂಕವನ್ನು ತಿಳಿದು, ಅಂದಿನಿಂದ ನಿರಂತರವಾಗಿ ಸರ್ಕಾರ ಕೆಂಪೇಗೌಡ ಜಯಂತಿಯನ್ನು ಆಚರಣೆ ಮಾಡುತ್ತಿದೆ. ಬೆಂಗಳೂರು ಇಂದು ಅಂತರರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಲ್ಪಟ್ಟಿದ್ದರೆ ಅದಕ್ಕೆ ಅಡಿಪಾಯ ಹಾಕಿದ್ದು ಕೆಂಪೇಗೌಡರು ಎಂದರುಅವರನ್ನು ಸ್ಮರಿಸುವ ಕೆಲಸವನ್ನು ಸರ್ಕಾರ ಮಾಡಿದೆ. ಬೆಂಗಳೂರಿನ ನಾಲ್ಕು ಭಾಗದಲ್ಲಿ ಗೋಪುರಗಳನ್ನು ಕಟ್ಟಿಸಿದ ಕೆಂಪೇಗೌಡರು ಅಂದೇ ಬೆಂಗಳೂರಿನ ಆಡಳಿತ ಹೇಗಿರಬೇಕೆಂದು ಅರಿತು ವೃತ್ತಿ ಆಧಾರಿತವಾಗಿ ನಗರತ್ ಪೇಟೆ, ಚಿಕ್ಕಪೇಟೆ, ಬಳೆಪೇಟೆ ಸೇರಿದಂತೆ ಅನೇಕ ಪೇಟೆಗಳನ್ನು ತಮ್ಮ ಆಡಳಿತಾವಧಿಯಲ್ಲಿ ನಿರ್ಮಿಸಿದ್ದರು. ಅವರ ಆಡಳಿತ ನಮಗೆಲ್ಲರಿಗೂ ಮಾದರಿ ಎಂದು ಮುಖ್ಯಮಂತ್ರಿಗಳು ತಿಳಿಸಿದರು.ಸರ್ಕಾರ ಬೆಂಗಳೂರು ಅಭಿವೃದ್ಧಿ ಗೊಳಿಸುವ ಕನಸನ್ನು ನನಸು ಮಾಡಲಿದೆಬೆಂಗಳೂರು ಅಭಿವೃದ್ಧಿ ಮಾಡುವ ಕನಸನ್ನು ನನಸು ಮಾಡುವ ಕೆಲಸವನ್ನು ನಮ್ಮ ಸರ್ಕಾರ ಮಾಡುತ್ತಿದೆ. ಸುಮನಹಳ್ಳಿಯ ಜಗಜೀವನ್ ರಾಮ್ ನಗರದಲ್ಲಿ ಕೆಂಪೇಗೌಡ ಜಯಂತಿ ಆಚರಿಸಲಾಗುತ್ತಿದೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ವಿಮಾನನಿಲ್ದಾಣದ ಬಳಿ ಇರುವ ಕೆಂಪೇಗೌಡರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ್ದಾರೆ ಎಂದು ತಿಳಿಸಿದರು.

**ಹುಲಿಗಳ ಸಾವು: ತನಿಖಾ ವರದಿಯ ನಂತರ ಕ್ರಮ:** ಚಾಮರಾಜನಗರದಲ್ಲಿ 5 ಹುಲಿಗಳು ಸಾವಿಗೀಡಾಗಿದ್ದು ಈ ಬಗ್ಗೆ ತನಿಖೆ ಕೈಗೊಳ್ಳಲು ಆದೇಶಿಸಲಾಗಿದೆ. ವರದಿ ಬಂದ ನಂತರ ಕ್ರಮ ಕೈಗೊಳ್ಳಲಾಗುವುದು ಎಂದರು.



### ಪಕ್ಷದಲ್ಲಿ ಆಂತರಿಕ ಜಗಳವಿಲ್ಲ: ಸಿಎಂ

**ಬೆಂಗಳೂರು:** ಪಕ್ಷದಲ್ಲಿ ಆಂತರಿಕ ಜಗಳ ಇರುವ ಬಗ್ಗೆ ಮಾಧ್ಯಮಗಳು ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು ಸಚಿವ ಕೆ.ಎನ್.ರಾಜಣ್ಣ ಅವರು ರಾಜ್ಯ ರಾಜಕೀಯದಲ್ಲಿ ಬೆಳವಣಿಗೆಯಾಗಬಹುದು ಎಂದು ಹೇಳಿದ್ದಾರೆ. ಇಂಥದ್ದೇ ಆಗುತ್ತದೆ ಎಂದು ಹೇಳಿಲ್ಲ ಎಂದರು. ಅವರು ಶುಕ್ರವಾರ ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

**ಹೇಳಿಕೆ ನಿರ್ಲಕ್ಷಿಸಿ:** ಸಚಿವ ರಾಜಣ್ಣ ಅವರ ಹೇಳಿಕೆಯನ್ನು ಹೇಗೆ ಅರ್ಥೈಸಿಕೊಳ್ಳಬೇಕೆಂದು ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು ಅದನ್ನು ನಿರ್ಲಕ್ಷಿಸುವುದು ಒಳ್ಳೆಯದು ಎಂದು ತಿಳಿಸಿದರು.

# ರಾಷ್ಟ್ರೀಯ ವಿದ್ಯುತ್ ಸುರಕ್ಷತಾ ಸಪ್ತಾಹ, ಜಾಗೃತಿ ಜಾಥಾ



**ದಾವಣಗೆರೆ:** ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತದಿಂದ ಜೂನ್ 27 ರಂದು ಬೆಸ್ಕಾಂ ವಿಭಾಗೀಯ ಕಚೇರಿ ಮುಂಭಾಗದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ವಿದ್ಯುತ್ ಸುರಕ್ಷತಾ ಸಪ್ತಾಹ ಜಾಗೃತಿ ಜಾಥಾಗೆ ಬೆಸ್ಕಾಂ ಅಧೀಕ್ಷಕ ಅಭಿಯಂತರರಾದ ಪಾಟೀಲ್ ಚಾಲನೆ ನೀಡಿದರು. ನಮ್ಮ ಜೀವದ ಜೊತೆಗೆ ನಮ್ಮ ಕುಟುಂಬವು ನಮ್ಮ ಮೇಲೆ ಅವಲಂಬಿತವಾಗಿರುತ್ತದೆ. ಹೆಲ್ಮೆಟ್ ಸಹಾಯದಿಂದ ನಮಗೆ ಯಾವ ತೊಂದರೆಯಾದಂತೆ ನೋಡಿಕೊಳ್ಳುತ್ತದೆ. ವಿದ್ಯುತ್ ಅಪಘಾತದಿಂದ ಸುಮಾರು 70 ಜನ ಸಾವನ್ನಾಪ್ಪಿದ್ದಾರೆ. ಎಲ್ಲ ವಿದ್ಯುತ್ ಕಾಮಗಾರಿಗಳನ್ನು ಎಷ್ಟೇ ಚಿಕ್ಕದಿರಲಿ, ಪರಿಣಿತ ವ್ಯಕ್ತಿಗಳಿಂದಲೇ ನಿರ್ವಹಿಸಬೇಕು, ಪ್ರಮಾಣೀಕೃತ ವಿದ್ಯುತ್ ಉಪಕರಣ, ಕೇಬಲ್, ವೈರ್ ಹಾಗೂ ಸುರಕ್ಷತಾ ಉಪಕರಣಗಳನ್ನು ಬಳಸಬೇಕು. ವಿದ್ಯುತ್ ಸ್ಥಾವರದಲ್ಲಿ ಪರಿಣಾಮಕಾರಿ ಭೂಸಂಪರ್ಕ ವ್ಯವಸ್ಥೆಯನ್ನು (ಅರ್ಥಿಂಗ್) ಕಲ್ಪಿಸಿ, ನಿರ್ವಹಿಸಬೇಕು. ಜೀವ ರಕ್ಷಕ ಆರ್‌ಸಿಡಿಗಳನ್ನು ಬಳಸಿ ವಿದ್ಯುತ್ ಸೋರಿಕೆಯಿಂದ ಉಂಟಾಗುವ ಅಪಾಯವನ್ನು ತಪ್ಪಿಸಬೇಕು ಎಂದರು. ಕಣ್ಣಿಗೆ ಗಾಯವಾಗದಂತೆ ಸುರಕ್ಷತಾ ಕನ್ನಡಕಗಳನ್ನು ಧರಿಸಿ, ಸರಿಯಾದ ಪಾದ ರಕ್ಷಣೆಯನ್ನು ಧರಿಸಬೇಕು. ಗಟ್ಟಿಯಾದ ಟೋಪಿ ಧರಿಸಿ, ಪಿಪಿಇ ಸ್ವಚ್ಛಗೊಳಿಸುವ, ನಿರ್ವಹಣೆಗಾಗಿ ತಯಾರಕರ ನಿರ್ದೇಶನಗಳನ್ನು ಅನುಸರಿಸಿ ತೆರೆದಿರುವ ಶಕ್ತಿಯುತ ಕಂಡಕ್ಟರ್‌ಗಳು ಅಥವಾ ಸರ್ಕ್ಯೂಟ್ ಭಾಗಗಳ ಬಳಿ ಕೆಲಸ ಮಾಡುವ ನೌಕರರು, ಉಪಕರಣಗಳು ಮತ್ತು ಕಂಡಕ್ಟರ್‌ಗಳ ಭಾಗಗಳೊಂದಿಗೆ ಸಂಪರ್ಕಕ್ಕೆ ಬಂದರೆ, ಇನ್ಸುಲೇಟೆಡ್ ಉಪಕರಣಗಳು ಮತ್ತು ನಿರ್ವಹಣಾ ಸಾಧನಗಳನ್ನು ಬಳಸಬೇಕು. ಉಪಕರಣಗಳು ಮತ್ತು ಉಪಕರಣಗಳ ನಿರೋಧಕ ವಸ್ತುವು ಹಾನಿಗೊಳಗಾದಲ್ಲಿ ರಕ್ಷಿಸಬೇಕು. ಸರ್ಕ್ಯೂಟ್ ವೋಲ್ಟೇಜ್‌ಗೆ ನಿರೋಧಿಸಲಾದ ಫ್ಯೂಸ್ ನಿರ್ವಹಣಾ ಸಾಧನಗಳನ್ನು ಫ್ಯೂಸ್ ಟರ್ಮಿನಲ್‌ಗಳು ಶಕ್ತಿಯುತವಾದಾಗ ಫ್ಯೂಸ್‌ಗಳನ್ನು ತೆಗೆದುಹಾಕಲು ಅಥವಾ ಸ್ಥಾಪಿಸಲು ಬಳಸಬೇಕು. ತೆರೆದಿರುವ ಶಕ್ತಿಯುತ ಭಾಗಗಳ ಬಳಿ ಬಳಸುವ ಎಲ್ಲಾ ಹಗ್ಗಗಳು ಮತ್ತು ಕೈ ರೇಖೆಗಳು ವಾಹಕವಲ್ಲದಂತಿರಬೇಕು ಎಂದರು. ಜಾಥಾವು ವಿದ್ಯಾರ್ಥಿ ಭವನದ ಕೆಇಬಿ ಕಚೇರಿಯಿಂದ ಆರಂಭವಾಗಿ ಜಯದೇವ ಸರ್ಕಲ್, ರೈಲ್ವೆ ನಿಲ್ದಾಣ, ಅರುಣ ಸರ್ಕಲ್, ರಾಂ &ಕೋ ಸರ್ಕಲ್ ಮೂಲಕ ಗುಂಡಿ ಸರ್ಕಲ್ ಬಂದು ತಲುಪಿತು. ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಮಂಜುನಾಥ, ಎಲೆಕ್ಟ್ರಿಕಲ್ ಇನ್ಸ್ಪೆಕ್ಟರ್ ದೇಸಾಯಿ, ಉಪ ಅಧ್ಯಕ್ಷರಾದ ಕೆ.ಸಿ.ಕುಮಾರಸ್ವಾಮಿ, ಶಿವಕುಮಾರ ಪಾಟೀಲ್, ವಿಭಾಗಾಧಿಕಾರಿ ತಿಪ್ಪೇಸ್ವಾಮಿ, ಸಂಜೀವಕುಮಾರ್ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಹೆಚ್ಚು ಅಂಕಪಡೆದ ವಿದ್ಯಾರ್ಥಿಗಳಿಗೆ ನಗದುಬಹುಮಾನ

» **ಚಳ್ಳಕೆರೆ**

ತಾಲ್ಲೂಕಿನ ಕಾಪರಹಳ್ಳಿ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಪ್ರಕಾಶ್‌ಸ್ಪಾಂಜಾ ಮತ್ತು ಐರನ್ ಪವರ್‌ವತಿಯಿಂದ ಸಾಣೀಕೆರೆ ಗ್ರಾಮಪಂಚಾಯಿತಿ ವ್ಯಾಪ್ತಿಯ ಪ್ರೌಢಶಾಲೆಗಳಲ್ಲಿ ಪ್ರಸ್ತುತ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನದುಗು ಬಹುಮಾನ ನೀಡಿ ಅಭಿನಂದಿಸಲಾಯಿತು.

ಕ್ಷೇತ್ರಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ನಗದುಬಹುಮಾನ ವಿತರಿಸಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಭಾಗದ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳು ಕಲಿಕೆಯಲ್ಲಿ ಹೆಚ್ಚು ಆಸಕ್ತಿತೋರುತ್ತಿರುವುದು ಸಂತಸದ ವಿಷಯ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ಅವಧಿಯಲ್ಲಿ ಉತ್ತಮ ವ್ಯಾಸಂಗ ಮಾಡಿ ಬದುಕುರೂಪಿಸಿಕೊಳ್ಳಬೇಕು. ವಿಶೇಷವಾಗಿ ಪ್ರಕಾಶ್‌ಸ್ಪಾಂಜಾ ಕಂಪನಿ ನಗದು ಬಹುಮಾನ ನೀಡಿ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಿದ್ದು ಶಿಕ್ಷಣ ಇಲಾಖೆಪರವಾಗಿ ಅವರನ್ನು ಅಭಿನಂದಿಸುವುದಾಗಿ ತಿಳಿಸಿದರು.



ವಿದ್ಯಾರ್ಥಿಗಳಾದ ಸಿ.ಎಸ್.ಮಹಲಿಂಗೇಗೌಡ, ಆರ್.ಭಾವನ,ಕೆ.ಆರ್.ವೀಣಾ,ಆರ್.ಸೌಮ್ಯ,ಎಸ್. ಚೇತನ, ಎಂ.ಅನುಷ ಇವರು ನಗದು ಬಹುಮಾನ ಪಡೆದರು.ಉಪಾಧ್ಯಕ್ಷಪಾರ್ಥಚಟ್ಟೋಪಾಧ್ಯಾಯ, ವಿದ್ಯಾರ್ಥಿಗಳು ಸ್ವಾಮಿವಿವೇಕಾನಂದ, ಅಬ್ದುಲ್ ಕಲಾಂರಂತಹ ಮಹಾನೀಯರ ಆದರ್ಶಗಳನ್ನು ರೂಡಿಸಿಕೊಳ್ಳಬೇಕೆಂದರು. ಸಿಎಸ್‌ಆರ್ ಮುಖ್ಯಸ್ಥ ಮಂಜುನಾಥ, ಗ್ರಾಪಂ ಅಧ್ಯಕ್ಷರು, ಸದಸ್ಯರು, ಮುಖ್ಯಶಿಕ್ಷಕ ನಾಗರಾಜು, ಸಿಆರ್‌ಪಿ ಮಹಂತೇಶ್‌ನಾಯಕ ಪಾಲ್ಗೊಂಡಿದ್ದರು.

# ಕೃಷಿ ಇಲಾಖೆ ಜಂಟಿನಿರ್ದೇಶಕರಿಂದ ರೈತ ಸಮುದಾಯಕ್ಕೆ ನಿರಂತರ ಅನ್ಯಾಯ



**ಚಳ್ಳಕೆರೆ:** ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮುಖಂಡ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ನೇತೃತ್ವದಲ್ಲಿ ಹಲವಾರು ರೈತರು ತಾಲ್ಲೂಕು ಕಚೇರಿ ಮುಂಭಾಗದ ಪ್ರತಿಭಟನೆ ನಡೆಸಿ ಜಂಟಿಕೃಷಿ ನಿರ್ದೇಶಕರ ಅವ್ಯವಹಾರದ ಬಗ್ಗೆ ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಕೃಷಿ ಸಚಿವರಿಗೆ ತಹಶೀಲ್ದಾರ್ ಮೂಲಕ ಮನವಿ ನೀಡಿದರು. ಬೇಡರೆಡ್ಡಿಹಳ್ಳಿ ಬಸವರೆಡ್ಡಿ ಮಾತನಾಡಿ, ಕಳೆದ ಹಲವಾರು ತಿಂಗಳುಗಳಿಂದ ಕೃಷಿ ಇಲಾಖೆಯ ಅಧಿಕಾರಿಗಳು ರೈತಹಿತವನ್ನು ಖಂಡಗಣಿಸಿ ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T